# ನಮ್ಮ ಜನ
# NAMMA JANA

ಸಂಪಾದಕರು: ದರ್ಶನ್.ಟಿ
Editor : DARSHAN.T

ಕನ್ನಡ ದಿನ ಪತ್ರಿಕೆ
Kannada Daily

ಸಂಪುಟ – 02 ಸಂಚಿಕೆ – 34 | Volume - 02 Issue - 34
ಶೀರ್ಷಿಕೆ ಕೋಡ್: ಕೆಎಆರ್ ಕೆಎಎನ್ 28269 | Title- Code: KARKAN 28269
ಚಿತ್ರದುರ್ಗ | Chitradurga
ದಿನಾಂಕ: 17–08–2024 ಶನಿವಾರ | Date: 17-08-2024 Saturday
ಪುಟ: 4 | Page: 4
ಬೆಲೆ : ರೂ.2–00 | Price: Rs. 2-00



ಒಳಪುಟದ ಸುದ್ದಿಗಳು

ಮುಂಗಾರು ಬೆಳೆ ಸಮೀಕ್ಷೆ ಜಾಗೃತಿ ರಥಯಾತ್ರೆಗೆ ಶಾಸಕ ರಘುಮೂರ್ತಿ ಚಾಲನೆ 2

ನಗರ ಸ್ವಚ್ಛತೆಗೆ ಮೊದಲ ಆದ್ಯತೆ, ಪೌರ ಕಾರ್ಮಿಕರು ಜವಾಬ್ದಾರಿ ನಿರ್ವಹಿಸಿ: ಸಂಸದೆ 3

ನಗರಂಗೆರೆ: ಸರ್ಕಾರಿ ಶಾಲೆಯಲ್ಲಿ ಪ್ಲಾಸ್ಟಿಕ್ ತ್ಯಜಿಸಿ ನೈರ್ಮಲ್ಯ ಸಂರಕ್ಷಿಸಿ ಆಂದೋಲನ 4



ಸುದ್ದಿ, ಜಾಹಿರಾತಿಗೆ
9686622252


### ಶುಭ ನುಡಿ

ಬಟ್ಟೆ ನೋಡಿ ಗೆಳೆತನ ಮಾಡಬೇಡ,
ಗುಣ ನೋಡಿ ಗೆಳೆತನ ಮಾಡು ,
ಯಾಕೆಂದರೆ ಬಟ್ಟೆ ಹರಿದು ಹೋಗುವ
ತನಕ ಮಾತ್ರ ಇರುತ್ತದೆ, ಗುಣ
ಸಾಯುವವರೆಗೂ ಇರುತ್ತದೆ !!

» ಶುಭೋದಯ

# ಕೆಎಂಇಆರ್‌ಸಿ ಅನುದಾನಡಿ 11 ಕೋಟಿ ರು. ವೆಚ್ಚದ ಕಾಮಗಾರಿಗಳಿಗೆ ಚಾಲನೆ

## ನೂತನ ಆಯುಷ್ಮಾನ್ ಆರೋಗ್ಯ ಉಪಕೇಂದ್ರ ಹಾಗೂ ವಸತಿ ಗೃಹಗಳ ನಿರ್ಮಾಣ: ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ

» ಚಿತ್ರದುರ್ಗ

ಕರ್ನಾಟಕ ಗಣಿ ಪರಿಸರ ಪುನಶ್ಚೇತನ ನಿಗಮ (ಕೆ.ಎಂ.ಇ.ಆರ್.ಸಿ) ಅನುದಾನದಡಿ ಚಿತ್ರದುರ್ಗ ತಾಲ್ಲೂಕಿಗೆ ರೂ.18 ಕೋಟಿ ಮೊತ್ತದ ಕಾಮಗಾರಿಗಳು ಮಂಜೂರಾಗಿವೆ. ಇದರಲ್ಲಿ ಚಿತ್ರದುರ್ಗ ವಿಧಾನಸಭಾ ಕ್ಷೇತ್ರ ವ್ಯಾಪ್ತಿಯ ಒಟ್ಟು ರೂ.11 ಕೋಟಿ ಕಾಮಗಾರಿಗಳಿಗೆ ಭೂಮಿ ಪೂಜೆ ನೆರವೇರಿಸುವ ಮೂಲಕ ಚಾಲನೆ ನೀಡಲಾಗಿದೆ ಎಂದು ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಹೇಳಿದರು.

ಹಿರೇಗುಂಟನೂರು ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರ ಆವರಣದಲ್ಲಿ ಶುಕ್ರವಾರ ವೈದ್ಯಾಧಿಕಾರಿ, ಶುಶ್ರೂಷಕರು ಹಾಗೂ ಗ್ರೂಪ್ ಡಿ ನೌಕರರ ವಸತಿ ಗೃಹ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿ ನಂತರ ಮಾಧ್ಯಮದವರೊಂದಿಗೆ ಅವರು ಮಾತನಾಡಿದರು. ಕೆ.ಎಂ.ಇ.ಆರ್.ಸಿ ಅನುದಾನದಲ್ಲಿ ಸಿದ್ದಾಪುರ, ಪಂಡರಹಳ್ಳಿ, ಭೀಮಸಮುದ್ರ ಗ್ರಾಮಗಳಲ್ಲಿ ನೂತನ ಆಯುಷ್ಮಾನ್ ಆರೋಗ್ಯ ಉಪಕೇಂದ್ರಗಳ ನಿರ್ಮಾಣಕ್ಕೆ ರೂ.75 ಲಕ್ಷ ನಿರ್ಮಾಣ ಕಾಮಗಾರಿಗೆ ರೂ.5 ಲಕ್ಷ ಜಿ.ಎಸ್.ಟಿ ಸೇರಿ ಒಟ್ಟು ರೂ.80 ಲಕ್ಷ ಅನುದಾನ ಮೀಸಲಿರಿಸಲಾಗಿದೆ. ಪೂರ್ಣ ಪ್ರಮಾಣದಲ್ಲಿ ಅನುದಾನವು ಲಭ್ಯವಿದ್ದು, ಯಾವುದೇ ಹಣಕಾಸಿನ ತೊಂದರೆಯಿಲ್ಲ ಆರೆಂಟು ತಿಂಗಳಲ್ಲಿ ಕಾಮಗಾರಿಗಳು ಪೂರ್ಣಗೊಳ್ಳಲಿವೆ ಎಂದು ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಹೇಳಿದರು.



ರೂ.2.90 ಕೋಟಿ ವೆಚ್ಚದಲ್ಲಿ ಭೀಮಸಮುದ್ರ ಪಿಹೆಚ್‌ಸಿ ಅಭಿವೃದ್ಧಿ:

ಭೀಮಸಮುದ್ರ ಗ್ರಾಮದಲ್ಲಿ ಶುಕ್ರವಾರ ಸಂಸದ ಗೋವಿಂದ ಎಂ ಕಾರಜೋಳ ಹಾಗೂ ಶಾಸಕ ಕೆ.ಸಿ.ವಿರೇಂದ್ರ ಪಪ್ಪಿ ಕೆ.ಎಂ.ಇ.ಆರ್.ಸಿ ಅನುದಾನದಡಿ ರೂ.2.90 ಕೋಟಿ ವೆಚ್ಚದಲ್ಲಿ ಗ್ರಾಮದ ಪ್ರಾಥಮಿಕ ಆರೋಗ್ಯ ಕೇಂದ್ರದ ಅಭಿವೃದ್ಧಿ ಹಾಗೂ ತಲಾ ರೂ.75 ಲಕ್ಷ ವೆಚ್ಚದಲ್ಲಿ ಎರಡು ನೂತನ ಆಯುಷ್ಮಾನ್ ಆರೋಗ್ಯ ಉಪಕೇಂದ್ರಗಳ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಿದರು.

ಈ ಸಂದರ್ಭದಲ್ಲಿ ಮಾತನಾಡಿದ ಸಂಸದ ಗೋವಿಂದ ಎಂ. ಕಾರಜೋಳ, ಆರೋಗ್ಯ ಕೇಂದ್ರಗಳ ಕಟ್ಟಡ ಕಾಮಗಾರಿಗಳು ಬೇಗ ಪೂರ್ಣಗೊಂಡು ಸಾರ್ವಜನಿಕರಿಗೆ ಇದರ ಲಾಭ ದೊರಕುವಂತಾಗಬೇಕು ಎಂದರು.

ಇದೇ ವೇಳೆ ಗ್ರಾಮದಲ್ಲಿ ನೂತನ ಸಿ.ಸಿ ರಸ್ತೆಗಳ ನಿರ್ಮಾಣ ಕಾಮಗಾರಿಗೆ ಭೂಮಿ ಪೂಜೆ ನೆರವೇರಿಸಲಾಯಿತು. ಸಿದ್ದಾಪುರ, ಪಂಡರಹಳ್ಳಿ ಗ್ರಾಮಗಳಲ್ಲಿ ಕೂಡ ಕೆ.ಎಂ.ಇ.ಆರ್.ಸಿ ಅನುದಾನ ಅಡಿ ಆಯುಷ್ಮಾನ್ ಆರೋಗ್ಯ ಉಪಕೇಂದ್ರಗಳ ನಿರ್ಮಾಣ ಮಾಡಲಾಗುತ್ತಿದೆ.

ಸಿದ್ದಾಪುರ ಗ್ರಾ.ಪಂ. ಅಧ್ಯಕ್ಷೆ ತಮ್ ಕಿನ್ ಬಾನು, ಹಿರೇಗುಂಟನೂರು ಗ್ರಾ.ಪಂ. ಅಧ್ಯಕ್ಷ ಸಿ.ರಾಧಮ್ಮ, ಭೀಮಸಮುದ್ರ ಗ್ರಾ.ಪಂ. ಅಧ್ಯಕ್ಷೆ ರಾಧಾ.ಆರ್, ಗೊಡಬನಹಾಳ್ ಗ್ರಾ.ಪಂ. ಅಧ್ಯಕ್ಷ ಮಧು ತಾ.ಪಂ. ಪ್ರಭಾರಿ ಇಓ ಚಂದ್ರಕುಮಾರ್, ತಾಲ್ಲೂಕು ಆರೋಗ್ಯಾಧಿಕಾರಿ ಬಿ.ವಿ.ಗಿರೀಶ್ ಇದ್ದರು.

## ಫಾಸ್ಟ್ ನ್ಯೂಸ್

### ಮಳೆ ವರದಿ: ಹೊಸದುರ್ಗ ತಾಲ್ಲೂಕಿನಲ್ಲಿ 22.9 ಮಿ.ಮೀ ಮಳೆ

» ಚಿತ್ರದುರ್ಗ

ಗುರುವಾರ ಸುರಿದ ಮಳೆ ವಿವರದನ್ವಯ ಹೊಸದುರ್ಗ ತಾಲ್ಲೂಕಿನಲ್ಲಿ 22.9 ಮಿ.ಮೀ ಮಳೆಯಾಗಿದ್ದು, ಇದು ಜಿಲ್ಲೆಯಲ್ಲಿ ಸುರಿದ ಅಧಿಕ ಮಳೆಯಾಗಿದೆ. ಜಿಲ್ಲೆಯ ಚಳ್ಳಕೆರೆ ತಾಲ್ಲೂಕಿನಲ್ಲಿ 18.8 ಮಿ.ಮೀ, ಹಿರಿಯೂರು ತಾಲ್ಲೂಕು 4.3 ಮಿ.ಮೀ, ಹೊಳಲ್ಕೆರೆ ತಾಲ್ಲೂಕು 6.5 ಮಿ.ಮೀ, ಚಿತ್ರದುರ್ಗ ತಾಲ್ಲೂಕಿನಲ್ಲಿ 10.30 ಹಾಗೂ ಮೊಳಕಾಲ್ಮುರು ತಾಲ್ಲೂಕಿನಲ್ಲಿ 1.3 ಮಿ.ಮೀ ಮಳೆಯಾಗಿದೆ. ಹೋಬಳಿವಾರು ಮಳೆ ವಿವರ: ಚಳ್ಳಕೆರೆ ತಾಲ್ಲೂಕಿನ ಚಳ್ಳಕೆರೆಯಲ್ಲಿ 17.9 ಮಿ.ಮೀ, ನಾಯಕನಹಟ್ಟಿ 18.2 ಮಿ.ಮೀ, ಪರಶುರಾಂಪುರ 22.5 ಮಿ.ಮೀ, ತಳಕು 16.7 ಮಿ.ಮೀ ಮಳೆಯಾಗಿದೆ. ಚಿತ್ರದುರ್ಗ ತಾಲ್ಲೂಕಿನ ಚಿತ್ರದುರ್ಗದಲ್ಲಿ 9.8 ಮಿ.ಮೀ, ಭರಮಸಾಗರ 7 ಮಿ.ಮೀ, ಹಿರೇಗುಂಟನೂರು 16.6 ಮಿ.ಮೀ, ತುರುವನೂರು 9.8 ಮಿ.ಮೀ ಮಳೆಯಾಗಿದೆ. ಹಿರಿಯೂರು ತಾಲ್ಲೂಕಿನ ಹಿರಿಯೂರಿನಲ್ಲಿ 3.8 ಮಿ.ಮೀ, ಐಮಂಗಲ 2.9 ಮಿ.ಮೀ, ಧರ್ಮಪುರ 8.6 ಮಿ.ಮೀ, ಜೆ.ಜೆ.ಹಳ್ಳಿ 2 ಮಿ.ಮೀ ಮಳೆಯಾಗಿದೆ. ಹೊಳಲ್ಕೆರೆ ತಾಲ್ಲೂಕಿನ ಹೊಳಲ್ಕೆರೆಯಲ್ಲಿ 3.7 ಮಿ.ಮೀ, ಬಿ.ದುರ್ಗ 15.2 ಮಿ.ಮೀ, ರಾಮಗಿರಿ 1.3 ಮಿ.ಮೀ, ತಾಳ್ಯ 6.5 ಮಿ.ಮೀ ಮಳೆಯಾಗಿದೆ. ಹೊಸದುರ್ಗ ತಾಲ್ಲೂಕಿನ ಹೊಸದುರ್ಗದಲ್ಲಿ 4.4 ಮಿ.ಮೀ, ಮಾಡದಕೆರೆ 7 ಮಿ.ಮೀ, ಮತ್ತೋಡು 49.6 ಮಿ.ಮೀ, ಶ್ರೀರಾಂಪುರ 46.2 ಮಿ.ಮೀ ಮಳೆಯಾಗಿದೆ. ಮೊಳಕಾಲ್ಮುರು ತಾಲ್ಲೂಕಿನ ಮೊಳಕಾಲ್ಮುರುನಲ್ಲಿ 1 ಮಿ.ಮೀ ಹಾಗೂ ದೇಮಸಮುದ್ರದಲ್ಲಿ 1.6 ಮಿ.ಮೀ ಮಳೆಯಾಗಿದೆ.

**21 ಮನೆಗಳು ಭಾಗಶಃ ಹಾನಿ:** ಗುರುವಾರ ಸುರಿದ ಮಳೆಗೆ ಜಿಲ್ಲೆಯಾದ್ಯಂತ ಒಟ್ಟು 21 ಮನೆಗಳು ಭಾಗಶಃ ಹಾನಿಯಾಗಿವೆ. ಚಿತ್ರದುರ್ಗ ತಾಲ್ಲೂಕಿನಲ್ಲಿ 15 ಮನೆಗಳು ಭಾಗಶಃ ಹಾನಿ ಹಾಗೂ 1 ಹಸು ಮೃತಪಟ್ಟಿದೆ. ಹೊಳಲ್ಕೆರೆಯಲ್ಲಿ 5 ಮನೆಗಳು ಭಾಗಶಃ ಹಾನಿಯಾಗಿವೆ ಹಾಗೂ ಮೊಳಕಾಲ್ಮುರ ತಾಲ್ಲೂಕಿನಲ್ಲಿ 1 ಮನೆ ಭಾಗಶಃ ಹಾನಿಯಾಗಿದೆ ಎಂದು ಜಿಲ್ಲಾಧಿಕಾರಿಗಳ ಕಚೇರಿ ಪ್ರಕಟಣೆ ತಿಳಿಸಿದೆ.

### ಯಲ್ಲದಕೆರೆ-ಹಿರಿಯೂರು ಮಾರ್ಗಕ್ಕೆ ಬಸ್ ಸೌಲಭ್ಯ

» ಚಿತ್ರದುರ್ಗ



ವಿದ್ಯಾರ್ಥಿಗಳ ಅನುಕೂಲಕ್ಕಾಗಿ ಯಲ್ಲದಕೆರೆ–ಹಿರಿಯೂರು ಮಾರ್ಗದಲ್ಲಿ ಸಾರಿಗೆ ಬಸ್ ಸೌಲಭ್ಯ ಕಲ್ಪಿಸಲಾಗಿದೆ ಎಂದು ಕನಾಟಕ ರಾಜ್ಯ ರಸ್ತೆ ಸಾರಿಗೆ ನಿಗಮದ ಚಿತ್ರದುರ್ಗ ಜಿಲ್ಲಾ ಹಿರಿಯ ವಿಭಾಗೀಯ ನಿಯಂತ್ರಣಾಧಿಕಾರಿ ಶ್ರೀನಿವಾಸ ಮೂರ್ತಿ ತಿಳಿಸಿದ್ದಾರೆ. ಯಲ್ಲದಕೆರೆ–ಹಿರಿಯೂರು ಮಾರ್ಗದಲ್ಲಿ ಬಸ್ ವ್ಯವಸ್ಥೆ ಇಲ್ಲದೆ ವಿದ್ಯಾರ್ಥಿಗಳಿಗೆ ತೀವ್ರ ಸಮಸ್ಯೆಯಾಗಿದೆ ಎಂಬುದಾಗಿ ಕೆಲ ಮಾಧ್ಯಮಗಳಲ್ಲಿ ವರದಿ ಪ್ರಕಟಗೊಂಡಿರುತ್ತದೆ. ಹಿರಿಯೂರು–ದಿಂಡಾವರ–ಚಿಗಳಿಕಟ್ಟೆ–ಯಲ್ಲದಕೆರೆ ಮಾರ್ಗದಲ್ಲಿ 2 ಸಿಂಗಲ್ ಹಾಗೂ ಹಿರಿಯೂರು–ಯಲ್ಲದಕೆರೆ–ಕೆ.ಕೆ.ಹಟ್ಟಿ–ಚಿಗಳಿಕಟ್ಟೆ–ಬ್ಯಾರಮಡು–ಶೇಷಪ್ಪನಹಳ್ಳಿ–ದಸೂಡಿ–ಹೊಯ್ಸಳಕಟ್ಟೆ ಮಾರ್ಗದಲ್ಲಿ 06 ಸಿಂಗಲ್ ಸಾರಿಗೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ಚಿತ್ರದುರ್ಗ–ಹಿರಿಯೂರು–ಹುಳಿಯಾರು ಮಾರ್ಗವಾಗಿ ಮೈಸೂರಿಗೆ ಕಾರ್ಯಾಚರಣೆಯಾಗುವ ಎಲ್ಲ ಸಾರಿಗೆಗಳು ಯಲ್ಲದಕೆರೆಯಲ್ಲಿ ನಿಲುಗಡೆ ಸೌಲಭ್ಯ ಕಲ್ಪಿಸಲಾಗಿರುತ್ತದೆ. ವಿಭಾಗದಲ್ಲಿ ಸಂಪನ್ಮೂಲಗಳ ಕೊರತೆ ಇರುವುದರಿಂದ ಸಂಪನ್ಮೂಲಗಳ ಲಭ್ಯತೆ ಮೇರೆಗೆ ಹಿರಿಯೂರು–ಹುಳಿಯಾರು ಮಾರ್ಗದಲ್ಲಿ ಹೆಚ್ಚುವರಿ ಸಾರಿಗೆ ಸೌಲಭ್ಯ ಕಲ್ಪಿಸಲು ಪರಿಶೀಲಿಸಲಾಗುತ್ತಿದೆ ಎಂದು ಕೆಎಸ್‌ಆರ್‌ಟಿಸಿ ಚಿತ್ರದುರ್ಗ ವಿಭಾಗೀಯ ನಿಯಂತ್ರಣಾಧಿಕಾರಿಗಳು ಸ್ಪಷ್ಟಪಡಿಸಿದ್ದಾರೆ.

# ನಾನು ಯಾರನ್ನೂ ಓಲೈಸಲು ಬಂದಿಲ್ಲ: ಪ್ರಥಮ್

» ಚಿತ್ರದುರ್ಗ

ಯಾರನ್ನೋ ಸಮಾಧಾನ ಮಾಡಿ, ಒಳ್ಳೆಯವನಾಗಲು ನಾನು ಬಂದಿಲ್ಲ. ನಿಮ್ಮ ಮತ್ತು ಸಹನ ಅವರ ಕಣ್ಣೀರು ನೋಡಿ ಬೇಸರವಾಯಿತು. ಮಾನವೀಯತೆ ಆಧಾರದ ಮೇಲೆ ಭೇಟಿ ಮಾಡಲು ಬಂದಿದ್ದೇನೆ ಎಂದು ನಟ ಒಳ್ಳೆ ಹುಡುಗ ಪ್ರಥಮ್ ತಿಳಿಸಿದರು.



ನಗರದ ರೇಣುಕಾಸ್ವಾಮಿ ನಿವಾಸಕ್ಕೆ ಗುರುವಾರ ಭೇಟಿ ನೀಡಿ ಕುಟುಂಬಕ್ಕೆ ಸಾಂತ್ವನ ಹೇಳಿ, 'ನಿಮ್ಮ ಮಗನ ಪ್ರಾಣ ಹೋಗಿದೆ. ನಾನು ಏನೇ ಕೊಟ್ಟರು ಮಗನ ಪ್ರಾಣ ವಾಪಾಸ್ಸು ಕೊಡಲು ಆಗುವುದಿಲ್ಲ. ನಿಮ್ಮನ್ನು ಸಮಾಧಾನ ಮಾಡಿ ಇನ್ಯಾರನ್ನೋ ಸಮರ್ಥನೆ ಮಾಡುವ ಸಣ್ಣ ವ್ಯಕ್ತಿತ್ವ ನನಗಿಲ್ಲ' ಎಂದರು.

'ನಿಮಗೆ ಈಗ ಇನ್ನೊಬ್ಬ ಮಗಳಿದ್ದಾರೆ, ಅದು ನಿಮ್ಮ ಗಮನದಲ್ಲಿರಲಿ. ನೀವು ಇನ್ನೂ 25 ವರ್ಷಗಳ ಕಾಲ ಆರೋಗ್ಯವಾಗಿದ್ದು ಬದುಕಬೇಕು. ಅವರ ಭವಿಷ್ಯ ಗಟ್ಟಿ ಮಾಡಬೇಕು. ನಿಮಗೆ ಮೊದಲಿಗಿಂತ ಈಗ ಜವಬ್ದಾರಿ ಇನ್ನೂ ಹೆಚ್ಚಿದೆ' ಎಂದರು.'ನನ್ನ ಮಗ ಏನು ಮಾಡಿದ್ದಾನೋ ನಮಗೆ ಗೊತ್ತಿಲ್ಲ, ಅದಕ್ಕೆ ಸಾವೇ ಪರಿಹಾರವೇ. ನನ್ನ ಮಗನ ಸಾವಿಗೆ ನಮಗೆ ನ್ಯಾಯ ಸಿಗಬೇಕು. ಕಾನೂನು ಮೂಲಕ ತಪ್ಪಿತಸ್ಥರನ್ನು ಕಂಡು ಹಿಡಿದು ಶಿಕ್ಷೆ ಕೊಡಿಸಿದರೆ ನಮಗೆ ಸಮಾಧಾನ. ಅವರು ಎಂಥವರೇ ಆರೋಪಿ ಇದ್ದರು ಅವರಿಗೆ ಶಿಕ್ಷೆ ಆಗಬೇಕು. ಯಾರನ್ನೂ ಬಿಡಬಾರದು' ಎಂದು ಶಿವನಗೌಡ್ರು ಮನವಿ ಮಾಡಿದರು.

ಬಳಿಕ ಸುದ್ದಿಗಾರರೊಂದಿಗೆ ಮಾತನಾಡಿದ ಪ್ರಥಮ್, 'ನಾನು ಯಾರನ್ನೂ ಓಲೈಸಲು ಬಂದಿಲ್ಲ, ನನಗನ್ನಿಸಿದ್ದನ್ನು ಮಾಡುತ್ತೇನೆ. ನಾನು ವೈಯಕ್ತಿಕವಾಗಿ ನೋಡಿದಂತೆ ಸಿದ್ದರಾಮಣ್ಣ ಹಾಗೆಲ್ಲ ಮಾಡಲ್ಲ. ಪ್ರಕರಣವನ್ನು ಮುಚ್ಚಿ ಹಾಕಬೇಕು ಎಂದು ಇದ್ದಿದ್ದರೇ ಇಷ್ಟು ದೊಡ್ಡದಾಗುತ್ತಿರಲಿಲ್ಲ. ಅದರೇ ಸಿಎಂ ಹಾಗಲ್ಲ, ಅವರು ಇಷ್ಟು ಫ್ರೀಹ್ಯಾಂಡ್ ಕೊಡದಿದ್ದರೆ ಸತ್ಯ ಹೊರಗೆ ಬರುತ್ತಿರಲಿಲ್ಲ. ಅದಕ್ಕೆ ನಾವೆಲ್ಲ ಸರ್ಕಾರ ಹಾಗೂ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರನ್ನು ಗೌರವಿಸಬೇಕು' ಎಂದರು. 'ಬೇರೆ ಯಾರೇ ಆಗಿದ್ದರು ಈ ವೇಳೆ ಬಗ್ಗಿ ಬಿಡೋರು, ಕಷ್ಟ ಆಗುತ್ತಿತ್ತು. ಆದರೆ ಸಿದ್ದರಾಮಯ್ಯ ಬಗ್ಗೋದಿಲ್ಲ. ಖಂಡಿತ ಇಡೀ ಕುಟುಂಬಕ್ಕೆ ನ್ಯಾಯ ಸಿಗಲಿದೆ' ಎಂದು ತಿಳಿಸಿದರು.

# ದೊಡ್ಡ ಉಳ್ಳಾರ್ತಿ ರಾಯಣ್ಣ ಪ್ರತಿಮೆ ಸ್ಥಾಪನೆ ಗೊಂದಲ: ಡಿವೈಎಸಿ ಸಭೆ



» ಚಳ್ಳಕೆರೆ

ತಾಲ್ಲೂಕಿನ ದೊಡ್ಡ ಉಳ್ಳಾರ್ತಿ ಗ್ರಾಮದ ಹಳೇ ವಿಎಲ್‌ಡಬ್ಲ್ಯೂ ಶಿಥಿಲಗೊಂಡ ಕಟ್ಟಡದ ಜಾಗದಲ್ಲಿ ವೀರಸಂಗೊಳ್ಳಿರಾಯಣ ಪ್ರತಿಮೆ ನಿರ್ಮಾಣ ಕುರಿತಂತೆ ಗ್ರಾಮದ ಕುರುಬ ಮತ್ತು ನಾಯಕ ಸಮಾಜದ ಬಂಧುಗಳಲ್ಲಿ ಅಸಮದಾನ ಮೂಡಿದ ಬಗ್ಗೆ ಡಿವೈಎಸ್ಪಿ ಕಚೇರಿಯಲ್ಲಿ ಎರಡೂ ಸಮುದಾಯದ ಮುಖಂಡರೊಂದಿಗೆ ಡಿವೈಎಸ್ಪಿ ಟಿ.ಬಿ.ರಾಜಣ್ಣ ಮತ್ತು ತಹಶೀಲ್ದಾರ್ ರೇಹಾನ್‌ಪಾಷ ಸುಧೀರ್ಘವಾಗಿ ಚರ್ಚೆ ನಡೆಸಿದರು. ಕುರುಬ ಸಮಾಜದ ಪರವಾಗಿ ಮಾತನಾಡಿದ ದೊಡ್ಡ ಉಳ್ಳಾರ್ತಿ ಕರಿಯಣ್ಣ, ಸದರಿ ಜಾಗದಲ್ಲಿ ವೀರಸಂಗೊಳ್ಳಿರಾಯಣ ಪ್ರತಿಮೆ ಸ್ಥಾಪನೆ ಕುರಿತಂತೆ ಈಗಾಗಲೇ ಜಿಲ್ಲಾಡಳಿತ ಮತ್ತು ತಾಲ್ಲೂಕು ಆಡಳಿತ ಒಪ್ಪಿಗೆ ಸೂಚಿಸಿವೆ.

ಪುಟ ↘ 3

## ಪ್ರಮುಖ ಸುದ್ದಿ

# ಹಿಂದೂ ಮಹಾ ಗಣಪತಿ ಪೆಂಡಾಲ್ ಪೂಜೆ

» ಚಿತ್ರದುರ್ಗ

ಹಿಂದೂ ಮಹಾ ಗಣಪತಿ ಪ್ರತಿಷ್ಠಾಪನೆಗೆ ದಿನಗಣನೆಶುರುವಾಗಿದ್ದು,ವರಮಹಾಲಕ್ಷ್ಮೀ ದಿನದ ಶುಭ ಶುಕ್ರವಾರದಂದು ಧ್ವಜಸ್ತಂಭಕ್ಕೆ ಪೂಜೆ ಸಲ್ಲಿಸಲಾಯಿತು. ಈ ಮೂಲಕ ಮಹೋತ್ಸವಕ್ಕೆ ವಿದ್ಯುಕ್ತ ಚಾಲನೆ ದೊರೆಯಿತು.

ನಗರದ ಬಿ.ಡಿ.ರಸ್ತೆಯಲ್ಲಿನ ಪಂಚಾಚಾರ್ಯ ಕಲ್ಯಾಣ ಮಂಟಪದ ಪಕ್ಕದ ಸ್ಥಳದಲ್ಲಿ ಪೆಂಡಾಲ್ ನಿರ್ಮಾಣ ಕಾರ್ಯ ಆರಂಭಿಸಲಾಗಿದೆ.

ಸೆ.7 ರಿಂದ ನಗರದಲ್ಲಿ ಹಿಂದೂ ಮಹಾ ಗಣಪತಿಯ ಪೂಜಾ ಕಾರ್ಯಗಳು ನಡೆಯಲಿದೆ. ಕಳೆದ ಹಲವಾರು ವರ್ಷಗಳಿಂದ ನಡೆಯುತ್ತಾ ಬಂದಿರುವ ಹಿಂದೂ ಮಹಾ ಗಣಪತಿ ಮಹೋತ್ಸವ ಇತ್ತೀಚಿನ ದಿನದಲ್ಲಿ ಹೆಚ್ಚಿನ ಜನ ಮನ್ನಣೆಯನ್ನುಗಳಿಸಿದೆ. ಹಿಂದೂ ಮಹಾ ಗಣಪತಿಯ ಶೋಭಾಯಾತ್ರೆಯಲ್ಲಿ ರಾಜ್ಯ, ನೆರೆ ರಾಜ್ಯದಿಂದಲೂ ವಿವಿಧೆಡೆಗಳಿಂದ ಲಕ್ಷಾಂತರ ಜನತೆ ಆಗಮಿಸುವುದರ ಮೂಲಕ ಅದರಲ್ಲಿ ಭಾಗವಹಿಸಲಿದ್ದಾರೆ.

ಇಂದು ಮುಂಜಾನೆಯಿಂದಲೇ ಗಣಪತಿ ನಿರ್ಮಾಣದಜಾಗದಲ್ಲಿತಾಯಿಭಾರತಾಂಭೆ ಮತ್ತು ಹನುಮಂತನ ಭಾವಚಿತ್ರಗಳನ್ನು ಇರಿಸಿ ಪೂಜೆ ನೆರವೇರಿಸಲಾಯಿತು. ಈ ಸಮಾರಂಭಕ್ಕೆ ಮಠಾಧೀಶರು, ಜನಪ್ರತಿನಿಧಿಗಳು ಸಾಕ್ಷಿಯಾದರು. ಗೋಮಾತೆಗೆ ಪೂಜೆ ಸಲ್ಲಿಸಿ ಅದಕ್ಕೆ ಹಸಿರು ಸೀರೆ, ಕೆಂಪು ಕಣ, ಬಳೆಗಳು ಹೂಗಳನ್ನು ಹಾಕಿ ಸಿಂಗಾರ ಮಾಡಲಾಯಿತು. ಸೆ. 7 ರಂದು ಹಿಂದೂ ಮಹಾ ಗಣಪತಿ ಇಲ್ಲಿ ಪ್ರತಿಷ್ಠಾಪನೆಯಾಗಲಿದ್ದು, ಸೆ, 27ರ ವರೆಗೆ ಪ್ರತಿ ದಿನ ಗಣಪತಿಗೆ ಪೂಜೆ ನೆರವೇರಲಿದ್ದು ಗಣಹೋಮ, ಚಂಡಿಕಾ ಹೋಮಗಳು ನಡೆಯಲಿವೆ.



ಸೆ.28 ರ ಶನಿವಾರ ಶೋಭಾಯಾತ್ರೆ ನಗರದ ಬಿ.ಡಿ.ರಸ್ತೆ, ಮಜೆಸ್ಟಿಕ್ ವೃತ್ತ, ಅಂಬೇಡ್ಕರ್ ವೃತ್ತ, ಮಹಾವೀರ ವೃತ್ತ, ಪ್ರವಾಸಿ ಮಂದಿರ ರಸ್ತೆ, ಎಸ್.ಬಿ.ಎಂ. ವೃತ್ತ, ಬಿ.ಡಿ.ರಸ್ತೆ, ಸಂತೇಪೇಟೆ, ಹೊಳಲ್ಕೆರೆ ರಸ್ತೆ, ಸಂಗೊಳ್ಳಿ ರಾಯಣ್ಣ ವೃತ್ತ, ಮಾರಮ್ಮ ದೇವಾಲಯ, ಕನಕ ವೃತ್ತದ ಮೂಲಕ ನಡೆದು ಚಂದ್ರವಳ್ಳಿಯನ್ನು ತಲುಪಲಿದೆ. ಸಂತೇಪೇಟೆ ವೃತ್ತದಲ್ಲಿ ಭಕ್ತಾಧಿಗಳಿಂದ ಪೂಜೆಯನ್ನು ಸ್ವೀಕಾರ ಮಾಡಿ ಚಂದ್ರವಳ್ಳಿಯಲ್ಲಿ ಗಣಪತಿಯನ್ನು ವಿಸರ್ಜನೆ ಮಾಡಲಾಗುವುದು. ಈ ಬಾರಿ ಗಣಪತಿ 14 ಅಡಿ ಎತ್ತರದಲ್ಲಿದ್ದು ಮಹಾರಾಷ್ಟ್ರದಲ್ಲಿ ನಿರ್ಮಾಣವಾಗುತ್ತಿದೆ, ಹಿಂದು ಮಹಾ ಗಣಪತಿಯ ಪೆಂಡಾಲ್‌ನ್ನು ಸಾಗರದ ತಂಡ ನಿರ್ಮಾಣ ಮಾಡಲಿದೆ.

ಮಾದಾರ ಚನ್ನಯ್ಯ ಗುರು ಪೀಠದ ಶ್ರೀ ಬಸವ ಮೂರ್ತಿ ಮಾದಾರ ಚನ್ನಯ್ಯ ಸ್ವಾಮೀಜಿ,ಯಾದವನಂದಗುರುಪೀಠದಶ್ರೀ ಕೃಷ್ಣಯಾದಾವನಂದ ಸ್ವಾಮೀಜಿ, ಉಪ್ಪಾರ ಗುರುಪೀಠದ ಶ್ರೀ ಭಗೀರಥ ಸ್ವಾಮೀಜಿ, ವಾಲ್ಮೀಕಿ ಗುರುಪೀಠದ ಶ್ರೀ ಪ್ರಸನ್ನಾನಂದ ಸ್ವಾಮೀಜಿ, ಕಬೀರಾನಂದಾಶ್ರಮದ ಶ್ರೀ ಶಿವಲಿಂಗಾನಂದ ಸ್ವಾಮೀಜಿ, ಲಂಬಾಣಿ ಗುರುಪೀಠದ ಶ್ರೀ ಸರ್ದಾರ ಸೇವಾಲಾಲ್ ಸ್ವಾಮೀಜಿ, ಕೊಟ್ಟೂರಿನ ಶಿವಪ್ರಕಾಶ ಸ್ವಾಮೀಜಿ, ಕುಂಚಿಟಿಗ ಗುರುಪೀಠದ ಶ್ರೀ ಶಾಂತವೀರ ಸ್ವಾಮೀಜಿ ಉಪಸ್ಥಿತರಿದ್ದರು.

ಸಂಸದ ಗೋವಿಂದ ಕಾರಜೋಳ, ಶಾಸಕರಾದ ಚಂದ್ರಪ್ಪ, ಕೆ.ಸಿ.ವಿರೇಂದ್ರ, ಬಿಜೆಪಿ ಜಿಲ್ಲಾಧ್ಯಕ್ಷ ಮುರಳಿ, 2024ರ ಹಿಂದೂ ಮಹಾ ಗಣಪತಿಯ ಉತ್ಸವ ಸವಿತಿಯ ಅಧ್ಯಕ್ಷ ನಯನ, ಮಾರ್ಗದರ್ಶಕರಾದ ಬದರಿನಾಥ್, ಭಜರಂಗದಳದ ಜಿಲ್ಲಾ ಕಾರ್ಯದರ್ಶಿ ಚನ್ನಕೇಶವ, ಸಂಯೋಜಕರಾದ ಸಂದೀಪ್, ಉಪಾಧ್ಯಕ್ಷ ಡಾ.ಮಂಜುನಾಥ್, ನಗರಾಧ್ಯಕ್ಷ ಅಶೋಕ್, ಉಪಾಧ್ಯಕ್ಷ ರಂಗನಾಥ್, ಸಂಚಾಲಕರಾದ ಸಾಗರ್, ಕಿಶೂರ್, ರಾಮಾಂಜನೇಯ, ಕಾರ್ತಿಕ್, ವಿಠಲ್‌ರಾವ್, ದರ್ಶನ್, ನಗರಸಭಾ ಸದಸ್ಯರಾದ ಸುರೇಶ್, ವೆಂಕಟೇಶ್, ಹರೀಶ್, ಅನುರಾಧ, ಶಶಿಧರ್, ಮಾಜಿ ಸದಸ್ಯರಾದ ರವಿಕುಮಾರ್, ನಗರಾಭೀವೃದ್ಧಿ ಪ್ರಾಧೀಕಾರದ ಮಾಜಿ ಅಧಕ್ಷರಾದ ತಿಪ್ಪೇಸ್ವಾಮಿ, ಸುರೇಶ್ ಸಿದ್ದಾಪುರ, ಡಾ.ಸಿದ್ದಾರ್ಥ, ವೆಂಕಟೇಶ್ ಯಾದವ್, ಉಮೇಶ್ ಕಾರಜೋಳ, ಪ್ರಶಾಂತ್, ಅಂಜನಪ್ಪ, ಅರುಣ್‌ಕುಮಾರ್ ಶರಣ್‌ಕುಮಾರ್, ಅನಿತ್‌ಕುಮಾರ್, ಮಲ್ಲಿಕಾರ್ಜುನ್ ಭಾಗವಹಿಸಿದ್ದರು.

## ಫಾಸ್ಟ್ ನ್ಯೂಸ್

### ಆ. 19 ರಂದು ನುಲಿಯ ಚಂದಯ್ಯ ಜಯಂತಿ

■ ಚಿತ್ರದುರ್ಗ

ಜಿಲ್ಲಾಡಳಿತ, ಜಿಲ್ಲಾ ಪಂಚಾಯತ್, ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಹಾಗೂ ನಗರಸಭೆ ಚಿತ್ರದುರ್ಗ ಇವರ ಸಂಯುಕ್ತ ಆಶ್ರಯದಲ್ಲಿ ನುಲಿಯ ಚಂದಯ್ಯ ಜಯಂತಿ ಆಚರಣೆ ಆ. 19 ರಂದು ಜಿಲ್ಲಾ ಕೇಂದ್ರದಲ್ಲಿ ನಡೆಯಲಿದೆ. ನುಲಿಯ ಚಂದಯ್ಯ ಜಯಂತಿ ಅಂಗವಾಗಿ ಮೆರವಣಿಗೆಯು ಅಂದು ಬೆಳಿಗ್ಗೆ 10 ಗಂಟೆಗೆ ನಗರದ ನೀಲಕಂಠೇಶ್ವರ ದೇವಸ್ಥಾನದಿಂದ ಪ್ರಾರಂಭವಾಗಲಿದೆ. ಮಾಚಿದೇವ ಮಹಾಸಂಸ್ಥಾನ ಮಠದ ಬಸವಪ್ರಭು ಸ್ವಾಮೀಜಿಯವರು ಮೆರವಣಿಗೆಗೆ ಚಾಲನೆ ನೀಡುವರು. ಬಳಿಕ ವೇದಿಕೆ ಕಾರ್ಯಕ್ರಮ ಮಧ್ಯಾಹ್ನ 12 ಗಂಟೆಗೆ ನಗರದ ತ.ರಾ.ಸು. ರಂಗಮಂದಿರದಲ್ಲಿ ಜರುಗಲಿದೆ. ಮುರುಘಾಮಠದ ಬಸವಪ್ರಭು ಸ್ವಾಮೀಜಿಯವರು ಹಾಗೂ ಭೋವಿ ಗುರುಪೀಠದ ಇಮ್ಮಡಿ ಸಿದ್ದರಾಮೇಶ್ವರ ಸ್ವಾಮೀಜಿ ಸಮಾರಂಭದ ದಿವ್ಯ ಸಾನಿಧ್ಯ ವಹಿಸುವರು. ಯೋಜನಾ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಡಿ. ಸುಧಾಕರ್ ಅವರು ಕಾರ್ಯಕ್ರಮ ಉದ್ಘಾಟಿಸುವರು. ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಶಾಸಕ ಕೆ.ಸಿ. ವೀರೇಂದ್ರ ಪಪ್ಪಿ ಅವರು ವಹಿಸುವರು. ಕಾರ್ಯಕ್ರಮದಲ್ಲಿ ಸಂಸದ ಗೋವಿಂದ ಎಂ. ಕಾರಜೋಳ, ಹೊಸದುರ್ಗ ಶಾಸಕರು ಹಾಗೂ ಆಹಾರ ಮತ್ತು ನಾಗರಿಕ ಸರಬರಾಜು ನಿಗಮದ ಅಧ್ಯಕ್ಷ ಬಿ.ಜಿ. ಗೋವಿಂದಪ್ಪ, ಚಳ್ಳಕೆರೆ ಶಾಸಕರು ಹಾಗೂ ರಾಜ್ಯ ಸಣ್ಣ ಕೈಗಾರಿಕೆಗಳ ಅಭಿವೃದ್ಧಿ ನಿಗಮದ ಅಧ್ಯಕ್ಷ ಟಿ. ರಘುಮೂರ್ತಿ, ಕರ್ನಾಟಕ ರಾಜ್ಯ ವಕ್ಫ್ ಮಂಡಳಿ ಅಧ್ಯಕ್ಷ ಕೆ. ಅನ್ವರ್ ಭಾಷಾ, ಮೊಳಕಾಲ್ಮೂರು ಶಾಸಕ ಎನ್.ವೈ. ಗೋಪಾಲಕೃಷ್ಣ, ಹೊಳಲ್ಕೆರೆ ಶಾಸಕ ಡಾ. ಎಂ. ಚಂದ್ರಪ್ಪ, ವಿಧಾನಪರಿಷತ್ ಸದಸ್ಯರುಗಳಾದ ಚಿದಾನಂದ ಎಂ. ಗೌಡ, ಕೆ.ಎಸ್. ನವೀನ್, ಡಿ.ಟಿ. ಶ್ರೀನಿವಾಸ್, ಕರ್ನಾಟಕ ದ್ರಾಕ್ಷಾರಸ ಮಂಡಳಿ ಅಧ್ಯಕ್ಷ ಡಾ. ಬಿ. ಯೋಗೇಶ್ ಬಾಬು, ಆದಿ ಜಾಂಬವ ಅಭಿವೃದ್ಧಿ ನಿಗಮದ ಅಧ್ಯಕ್ಷ ಜಿ.ಎಸ್. ಮಂಜುನಾಥ್, ಕರ್ನಾಟಕ ಸಫಾಯಿ ಕರ್ಮಚಾರಿ ಆಯೋಗದ ಅಧ್ಯಕ್ಷೆ ಸವಿತಾ ರಘು, ಚಿತ್ರದುರ್ಗ ನಗರಾಭಿವೃದ್ಧಿ ಪ್ರಾಧಿಕಾರದ ಅಧ್ಯಕ್ಷ ತಾಜ್‌ಪೀರ್, ಕೊರಮ ಸಮಾಜದ ಜಿಲ್ಲಾಧ್ಯಕ್ಷ ಕೆ. ಕೃಷ್ಣಪ್ಪ, ಜಿಲ್ಲಾ ಪ್ರಧಾನ ಕಾರ್ಯದರ್ಶಿ ದ್ವಾರಕನಾಥ್ ಮುಂತಾದವರು ಕಾರ್ಯಕ್ರಮದಲ್ಲಿ ಪಾಲ್ಗೊಳ್ಳುವರು. ಆರ್. ನುಲೇನೂರಿನ ನಿವೃತ್ತ ಶಿಕ್ಷಕ ವಿ.ಟಿ. ಚಂದಯ್ಯ ವಿಶೇಷ ಉಪನ್ಯಾಸ ನೀಡುವರು, ಸುಜೀತ್ ಕುಲಕರ್ಣಿ ಅವರು ಗೀತಗಾಯನ ನಡೆಸುವರು.

### ನಾಳೆ ಭಗವಾನ್ ಶ್ರೀ ಜಿವ್ಹೇಶ್ವರ ಸ್ವಾಮಿ ಜಯಂತಿ

» ದಾವಣಗೆರೆ

ಹಿಂದುಳಿದ ಸಮಾಜಗಳಲ್ಲೊಂದಾದ ಸ್ವಕುಳಸಾಳಿ ಸಮಾಜದ ಆರಾಧ್ಯ ದೈವ ಭಗವಾನ್ ಶ್ರೀ ಜಿವ್ಹೇಶ್ವರ ಸ್ವಾಮಿ ಜಯಂತ್ಯೋತ್ಸವವು ನಾಡಿದ್ದು ದಿನಾಂಕ 17ರ ಶನಿವಾರ ನಗರದ ಶ್ರೀ ಸದ್ಯೋಜಾತ ಶಿವಾಚಾರ್ಯ ಸ್ವಾಮೀಜಿ ಹಿರೇಮಠದಲ್ಲಿ ನಡೆಯಲಿದೆ. ಅಂದು ಪ್ರಾತಃಕಾಲ 6.30ಕ್ಕೆ ಪೂಜಾ ವಿಧಿ–ವಿಧಾನಗಳು ಆರಂಭವಾಗಲಿದ್ದು, ಬೆಳಿಗ್ಗೆ 8 ಗಂಟೆಗೆ ಸಮಾಜದ ಮಹಿಳೆಯರಿಂದ ತೊಟ್ಟಿಲು ಮತ್ತು ಉಡಿ ತುಂಬುವ ಕಾರ್ಯಕ್ರಮ ಜರುಗಲಿದೆ. ನಂತರ 9 ಗಂಟೆಗೆ ವಿವಿಧ ಪುಷ್ಪಗಳಿಂದ ಸಿಂಗರಿಸಲ್ಪಟ್ಟ ಟ್ರ್ಯಾಕ್ಟರ್ ನಲ್ಲಿ ಶ್ರೀ ಜಿವ್ಹೇಶ್ವರ ಸ್ವಾಮಿ ಭಾವಚಿತ್ರದ ಮೆರವಣಿಗೆ ರಾಜಬೀದಿಗಳಲ್ಲಿ ಸಂಚರಿಸಲಿದೆ. ನಂತರ ಬೆಳಿಗ್ಗೆ 10.30ಕ್ಕೆ ಸಭಾ ಕಾರ್ಯಕ್ರಮ ಏರ್ಪಾಡಾಗಿದ್ದು, ಶ್ರೀ ಜಡೇಸಿದ್ದ ಶಿವಯೋಗೇಶ್ವರ ಮಠದ ಸಂಸ್ಕೃತ ವಿದ್ವಾಂಸರಾದ ಶ್ರೀ ಶಿವಾನಂದ ಸ್ವಾಮೀಜಿ ದಿವ್ಯ ಸಾನ್ನಿಧ್ಯ ವಹಿಸುವರು. ಸ್ವಕುಳಸಾಳಿ ಸಮಾಜದ ಅಧ್ಯಕ್ಷ ಮೋಹನ್ ಪಿ. ಗಾಯಕವಾಡ ಕಾರ್ಯಕ್ರಮದ ಅಧ್ಯಕ್ಷತೆ ವಹಿಸುವರು. ಹಿರಿಯ ಶಾಸಕ ಶಾಮನೂರು ಶಿವಶಂಕರಪ್ಪ, ಜಿಲ್ಲಾ ಉಸ್ತುವಾರಿ ಸಚಿವ ಶಾಮನೂರು ಮಲ್ಲಿಕಾರ್ಜುನ್, ಲೋಕಸಭಾ ಸದಸ್ಯರಾದ ಡಾ. ಪ್ರಭಾ ಮಲ್ಲಿಕಾರ್ಜುನ್, ದೂಡಾ ಅಧ್ಯಕ್ಷ ದಿನೇಶ್ ಕೆ. ಶೆಟ್ಟಿ, ದೂಡಾ ಆಯುಕ್ತ ತಿಮ್ಮಣ್ಣ ಹುಲ್ಲುಮನೆ, ದೂಡಾ ಮಾಜಿ ಅಧ್ಯಕ್ಷ ಮಾಲತೇಶರಾವ್ ಜಾಧವ್, ಮಾಜಿ ಮಹಾಪೌರರಾದ ಶ್ರೀಮತಿ ಅನಿತಾಬಾಯಿ ಜಾಧವ್, ವೃತ್ತಿಪರ ಪತ್ರ ಬರಹಗಾರರ ಅಸೋಸಿಯೇಷನ್ ಅಧ್ಯಕ್ಷ ಡಿ.ಕೆ. ಸಂಗಮೇಶ್ ಮುಖ್ಯ ಅತಿಥಿಗಳಾಗಿ ಪಾಲ್ಗೊಳ್ಳುವರು.

### ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ

» ಹೊಸದುರ್ಗ

ತಾಲ್ಲೂಕು ಭಗೀರಥ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘ. ಇವರ ಸಂಯುಕ್ತ ಆಶ್ರಯದಲ್ಲಿ ಭಗೀರಥ ಸಮುದಾಯದ ಪ್ರತಿಭಾವಂತ ವಿದ್ಯಾರ್ಥಿಗಳಿಗಾಗಿ ಪ್ರತಿಭಾ ಪುರಸ್ಕಾರ ಕಾರ್ಯಕ್ರಮವನ್ನು ಹಮ್ಮಿಕೊಂಡಿದ್ದು 202324ನೇ ಸಾಲಿನ 10 ಹಾಗೂ 12 ನೇ ತರಗತಿಯ ಶೇಕಡ 80 ಕ್ಕಿಂತ ಹೆಚ್ಚು ಅಂಕ ಗಳಿಸಿದ ಪ್ರತಿಭಾವಂತ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಿದ್ದು ವಿದ್ಯಾರ್ಥಿಗಳ ಅಧಿಕೃತ ಅಂಕಪಟ್ಟಿ,ಫೋಟೋ ಹಾಗೂ ಆಧಾರ್ ಕಾರ್ಡ್ ಸಹಿತ ಈ ಕೆಳಕಂಡ ವಿಳಾಸದಲ್ಲಿ ಅಥವಾ ಈ ದೂರವಾಣಿ ಸಂಖ್ಯೆಗಳಿಗೆ ವಾಟ್ಸಪ್ ಮೂಲಕ ತಮ್ಮ ಮೂಲ ದಾಖಲಾತಿಗಳನ್ನ ಹಾಕಿ ಸಂಪರ್ಕಿಸಲು ತಾಲೂಕು ಭಗೀರಥ ನೌಕರರ ಕ್ಷೇಮಾಭಿವೃದ್ಧಿ ಮತ್ತು ಸಾಂಸ್ಕೃತಿಕ ಸಂಘದ ಅಧ್ಯಕ್ಷ ಆರ್ ಲಕ್ಷ್ಮಯ್ಯ ತಿಳಿಸಿದ್ದಾರೆ.

**ಸಂಪರ್ಕಿಸಬೇಕಾದ ವಿಳಾಸ :** ಉಪ್ಪಾರ ಹಾಸ್ಟೆಲ್ ಕಟ್ಟಡ ಗಾಂಧಿ ಸರ್ಕಲ್ ಹೊಸದುರ್ಗ. ದೂರವಾಣಿ ಸಂಖ್ಯೆ 9611072199,,9980197415,,9980376040,,8970446858,,8970161215,

# ಈರುಳ್ಳಿ ಬೆಳೆ: ರೋಗ ಕೀಟಗಳ ನಿರ್ವಹಣಾ ಕ್ರಮ

» ಚಿತ್ರದುರ್ಗ

ಜಿಲ್ಲೆಯಲ್ಲಿ ಈರುಳ್ಳಿ ಬೆಳೆಯು ಪ್ರಮುಖ ಬೆಳೆಯಾಗಿರುತ್ತದೆ. ಈರುಳ್ಳಿ ಬೆಳೆಯನ್ನು ಚಿತ್ರದುರ್ಗ ತಾಲ್ಲೂಕಿನಲ್ಲಿ 9,461 ಹೆಕ್ಟೇರ್, ಚಳ್ಳಕೆರೆ 11,299 ಹೆಕ್ಟೇರ್, ಹೊಳಲ್ಕೆರೆ 1777 ಹೆಕ್ಟೇರ್, ಹಿರಿಯೂರು 5991 ಹೆಕ್ಟೇರ್, ಹೊಸದುರ್ಗ 3300 ಹೆಕ್ಟೇರ್, ಮೊಳಕಾಲ್ಮೂರು 819 ಹೆಕ್ಟೇರ್ ಒಟ್ಟಾರೆ ಜಿಲ್ಲೆಯಲ್ಲಿ 32,646 ಹೆಕ್ಟೇರ್‌ನಲ್ಲಿ ಬೆಳೆಯಲಾಗುತ್ತಿದೆ.



ಇತ್ತೀಚಿನ ದಿನಗಳಲ್ಲಿ ಜಿಟಿಜಿಟಿ ಮಳೆಯಿಂದಾಗಿ ಹೊಸದುರ್ಗ ತಾಲ್ಲೂಕಿನಲ್ಲಿ ಮಣ್ಣಿನ ತೇವಾಂಶ ಹೆಚ್ಚಾಗಿ ಈರುಳ್ಳಿ ಬೆಳೆಗಳಿಗೆ ಥ್ರಿಪ್ಸ್ ನುಶಿ ಕೀಟ ಮತ್ತು ನೇರಳೆ ಎಲೆ ಮಚ್ಚೆ ರೋಗ ಬಾದೆ ಹೆಚ್ಚಾಗಿದ್ದು, ರೋಗ ಮತು ಕೀಟ ಬಾದೆಯಿಂದ ಬೆಳೆಯನ್ನು ರಕ್ಷಿಸಲು, ರೋಗ ನಿರ್ವಹಣೆ ಮಾಲು ತೋಟಗಾರಿಕೆ ಇಲಾಖೆ ವತಿಯಿಂದ ರೈತರಿಗೆ ಸಲಹೆ ನೀಡಿದ್ದಾರೆ.

ಈರುಳ್ಳಿ ಬೆಳೆಗೆ ಥ್ರಿಪ್ಸ್ ನುಶಿಗಳು ಎಲೆಯ ಮೇಲೆ ಹೆಚ್ಚಾಗಿ ಕಂಡುಬರುತ್ತದೆ. ಎಲೆಗಳ ಸುಳಿಯಲ್ಲಿ ಮತ್ತು ಎಲೆಗಳ ಕೆಳಗೆ ಕುಳಿತು ರಸ ಹೀರುತ್ತವೆ. ಎಲೆಗಳ ಮೇಲೆ ಬಿಳಿ ಬಿಳಿಯಾದ ಮಚ್ಚೆಗಳು ಕಾಣಿಸುತ್ತವೆ, ನಂತರ ತುದಿಯಿಂದ ಒಣಗುತ್ತವೆ. ಥ್ರಿಪ್ಸ್ ನುಶಿ ನಿರ್ವಹಣೆಗೆ ಬಿತ್ತಿದ 3 ವಾರಗಳ ನಂತರ ಬೆಳೆಗೆ 0.25 ಮಿಲಿ ಇಮಿಡಾಕ್ಲೋಪ್ರಿಡ್ ಅಥವಾ 1.7 ಮಿ.ಲೀ ಡೈಮಿಥೋಯೇಟ್ 30 ಇ.ಸಿ ಅಥವಾ 0.5 ಮಿ.ಲೀ ಫಾಸ್ಟಾಮಿಡಾನ್ 85 ಡಬ್ಲ್ಯೂ ಎಸ್.ಸಿ ಅಥವಾ 1.3 ಮಿ.ಲೀ ಆಕ್ಸಿಡೆಮೆಟಾನ್ ಮಿಥೈಲ್ 1 ಲೀ. ನೀರಿನಲ್ಲಿ ಕರಗಿಸಿ ಸಿಂಪಡಿಸಬೇಕು. ಬಿತ್ತನೆಯಾದ 6 ವಾರಗಳ ನಂತರ ಕ್ರಮಾಂಕ 1 ರಲ್ಲಿ ಸೂಚಿಸಲಾದ ಸಿಂಪಡನೆಯನ್ನು ಮತ್ತೆ ಮಾಡಬೇಕು, ಪ್ರತಿ ಹೆಕ್ಟೇರಿಗೆ 360 ಲೀ.ಸಿಂಪಡಣಾ ದ್ರಾವಣ ಬಳಸಬೇಕು.ಬಿತ್ತನೆಯಾದ 9 ಮತ್ತು 11 ವಾರಗಳ ನಂತರ ಕ್ರಮಾಂಕ 1 ರಲ್ಲಿ ಸೂಚಿಸಿಲಾದ ದ್ರಾವಣವನ್ನೇ ಪ್ರತಿ ಹೆಕ್ಟೇರಿಗೆ 450 ಲೀ. ಸಿಂಪಡಿಸಬೇಕು.

ನೇರಳೆ ಎಲೆ ಮಚ್ಚೆ ರೋಗವು ಮೊದಲಿಗೆ ಬಿಳಿ ಭಾಗದಿಂದ, ನೇರಳೆ ಭಾಗಕ್ಕೆ ಪರಿವರ್ತನೆಗೊಂಡು, ಆಮೇಲೆ ಎಲೆಗಳು ಒಣಗುತ್ತವೆ. ನೇರಳೆ ಎಲೆ ಮಚ್ಚೆ ರೋಗ ನಿರ್ವಹಣೆಗೆ ಬೀಜವನ್ನು ಪಾದರಸ ಸಂಯುಕ್ತ ವಸ್ತು ಅಥವಾ ಕ್ಯಾಪ್ಟಾನ್ (2 ಗ್ರಾಂ ಪ್ರತಿ ಕಿ.ಗ್ರಾಂ ಬೀಜಕ್ಕೆ) ದಿಂದ ಉಪಚರಿಸಬೇಕು.

ಹೊಸದುರ್ಗ ತಾಲ್ಲೂಕಿನಲ್ಲಿ ಕಪ್ಪು ಮಣ್ಣಿನಲ್ಲಿ ಈರುಳ್ಳಿ ಬೆಳೆಯನ್ನು ಬೆಳೆಯಲಾಗುತ್ತಿದ್ದು, ಇತ್ತೀಚಿನ ದಿನಗಳಲ್ಲಿ ಜಿಟಿಜಿಟಿ ಮಳೆಯಿಂದಾಗಿ ಮಣ್ಣಿನಲ್ಲಿ ತೇವಾಂಶ ಹೆಚ್ಚಾಗಿ ನೇರಳೆ ಎಲೆ ಮಚ್ಚೆರೋಗ ಕಾಣಿಸಿಕೊಂಡಿದ್ದು ನೀರು ಇಂಗಲು ಸರಿಯಾದ ರೀತಿಯಲ್ಲಿ ಒಳಚರಂಡಿ ವ್ಯವಸ್ಥೆ ಮಾಡುವುದು.

2 ರಿಂದ 3 ವರ್ಷಕ್ಕೊಮ್ಮೆ ಬೆಳೆ ಬದಲಾವಣೆ ಮಾಡುವುದು. ಸಿಸ್ಟೆಮ್ಯಾಟಿಕ್ ಶಿಲೀಂದ್ರ ನಾಶಕಗಳಾದ ಪ್ರೊಪಿಕೋನೋಜೋಲ್ 25 ಇ.ಸಿ 1 ಮಿ.ಲೀ. ಅಥವಾ ಹೆಕ್ಸಕೋನೋಜೋಲ್ 1 ಮಿ.ಲೀ. ಪ್ರತಿ ಲೀಟರ್ ನೀರಿನಲ್ಲಿ ಕರಗಿಸಿ ಜೊತೆಗೆ ಅಂಟು ದ್ರಾವಣ 0.25 ಮಿ.ಲೀ ಪ್ರತಿ ಲೀಟರ್ ನೀರಿಗ ಬೆರೆಸಿ 10 ದಿನಗಳಿಗೊಮ್ಮೆಯಾದರು ಶಿಲೀಂದ್ರ ನಾಶಕಗಳನ್ನು ಸಿಂಪಡಿಸಬೇಕು.

ಈರುಳ್ಳಿ ಬೆಳೆಯ ರೋಗ ನಿಯಂತ್ರಣಕ್ಕೆ ತೋಟಗಾರಿಕೆ ಇಲಾಖೆಯು ಸಲಹೆ ನೀಡಿರುವ ನಿರ್ವಹಣಾ ಕ್ರಮಗಳನ್ನು ಕೈಗೊಳ್ಳಬೇಕು ಹಾಗೂ ಹೆಚ್ಚಿನ ಮಾಹಿತಿಗಾಗಿ ತಾಲ್ಲೂಕಿನ ಹಿರಿಯ ಸಹಾಯಕ ತೋಟಗಾರಿಕೆ ನಿರ್ದೇಶಕರ ಕಚೇರಿ ಸಂಪರ್ಕಿಸಬಹುದು ಎಂದು ತೋಟಗಾರಿಕೆ ಇಲಾಖೆ ಉಪನಿರ್ದೇಶಕರು ಕೋರಿದ್ದಾರೆ.

# ಶೋಷಿತರನ್ನು ಮುಖ್ಯವಾಹಿನಿಗೆ ತರಲು ಯೋಜನೆ

» ಚಿತ್ರದುರ್ಗ

ಶೋಷಿತರನ್ನು ಮುಖ್ಯವಾಹಿನಿಗೆ ತರುವಂತಹ ಅನೇಕ ಯೋಜನೆಗಳನ್ನು ಪ್ರಧಾನಿ ಮೋದಿ ಜಾರಿ ಮಾಡಿದ್ದಾರೆ ಎಂದು ಸಂಸದ ಗೋವಿಂದ ಕಾರಜೋಳ ತಿಳಿಸಿದರು.

ನಗರದ ಭಾರತೀಯ ಜನತಾ ಪಾರ್ಟಿಯ ಕಚೇರಿಯಲ್ಲಿ ಗುರುವಾರ ಹಮ್ಮಿಕೊಂಡಿದ್ದ 78 ನೇ ಸ್ವಾತಂತ್ರ್ಯ ದಿನಾಚರಣೆಯಲ್ಲಿ ರಾಷ್ಟ್ರ ಧ್ವಜಾರೋಹಣ ನೆರವೇರಿಸಿ ಮಾತನಾಡಿದರು.



ದೇಶಕ್ಕೆ ಸ್ವಾತಂತ್ರ್ಯ ಬಂದ ನಂತರ ಪಂಡಿತ್ ಜವಹಾರ್ ಲಾಲ್ ನೆಹರು ನಂತರ ಪ್ರಧಾನ ಮಂತ್ರಿಗಳಾದ ನರೇಂದ್ರ ಮೋದಿಯವರು, 3 ನೇ ಬಾರಿಗೆ ದೇಶದ ಪ್ರಧಾನ ಮಂತ್ರಿಯಾಗಿದ್ದು ಅಲ್ಲದೆ ಸತತವಾಗಿ 11 ಬಾರಿ ದೇಶದ ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗವಹಿಸಿ ಕೆಂಪು ಕೋಟೆಯಲ್ಲಿ ದೇಶದ ಬಾವುಟವನ್ನು ಹಾರಿಸಿ ದೇಶವನ್ನು ಉದ್ದೇಶಿಸಿ ಮಾತನಾಡಿದ್ದಾರೆ. ಹೆಮ್ಮೆಯ ಸಂಗತಿಯಾಗಿದೆ ಎಂದರು.

ಈ ದಿನ ದೇಶದ ಸ್ವಾತಂತ್ರ್ಯಕ್ಕಾಗಿ ಹೋರಾಟವನ್ನು ಮಾಡಿ ತಮ್ಮ ಪ್ರಾಣವನ್ನು ತ್ಯಾಗ ಮಾಡಿದವರನ್ನು ನೆನಸುವ ದಿನವಾಗಿದೆ. ಮಹನೀಯರ ಸ್ಮರಣೆ ಮಾಡುವ ದಿನವಾಗಿದೆ. ಇಂದಿನ ಯುವ ಜನಾಂಗಕ್ಕೆ ಸ್ವಾತಂತ್ರ್ಯಕ್ಕಾಗಿ ನಡೆದ ಹೋರಾಟದ ಬಗ್ಗೆ ಪರಿಚಯಿಸುವ ದಿನವಾಗಿದೆ. ಈ ಹಿನ್ನಲೆಯಲ್ಲಿ ದೇಶದಲ್ಲಿ ಸಂಭ್ರಮದಲ್ಲಿ ದೇಶದ 78 ನೇ ಸ್ವಾತಂತ್ರ್ಯ ದಿನಾಚರಣೆಯನ್ನು ಆಚರಿಸಲಾಗುತ್ತಿದೆ ಎಂದು ತಿಳಿಸಿದರು.

ಬಿಜೆಪಿ ಜಿಲ್ಲಾಧ್ಯಕ್ಷ ಎ.ಮುರಳಿ, ನಗರಾಭಿವೃದ್ಧಿ ಪ್ರಾಧಿಕಾರದ ಮಾಜಿ ಅಧ್ಯಕ್ಷ ಸುರೇಶ್ ಸಿದ್ದಾಪುರ, ಪ್ರಧಾನ ಕಾರ್ಯದರ್ಶಿ ಸಂಪತ್ ಕುಮಾರ್ ಭಾಗವಹಿಸಿದ್ದರು.



**78ನೇ ಸ್ವತಂತ್ರ ದಿನಾಚರಣೆಯನ್ನು ಶ್ರೀ ಹೇಮರಡ್ಡಿ ಲಿಂಗಾಯತ ಸಮಾಜದಿಂದ ವಿಜೃಂಭಣೆಯಿಂದ ಆಚರಣೆ ಮಾಡಲಾಯಿತು, ಧ್ವಜಾರೋಹಣವನ್ನು ಸಮಾಜದ ಜಿಲ್ಲಾ ಅಧ್ಯಕ್ಷರಾದ ಜಿ.ಚಿದಾನಂದಪ್ಪ ನೆರವೇರಿಸಿದರು, ಉಪಾಧ್ಯಕ್ಷರು ಆದ ನಾಗರಾಜ್ ಸಂಗಮ್ ಧ್ವಜವಂದನೆ ನಡೆಸಿಕೊಟ್ಟರು,ಸಮಾಜದ ಪದಾಧಿಕಾರಿಗಳಾದ ಡಾ:ಮಹಾಂತೇಶ್,ರವೀಂದ್ರನಾಥ್,ನಾಗಭೂಷಣ್,ವೀರಭದ್ರಪ್ಪ,ಶಶಿಧರ್ ,ಚಂದ್ರಶೇಖರ, ದಯಾನಂದ್ ಪಾಟೀಲ್ ಇತರರು ಹಾಜರಿದ್ದರು.**

## ಜ್ಞಾನಭಾರತಿ ವಿದ್ಯಾಲಯದಲ್ಲಿ 78ನೇ ಸ್ವಾತಂತ್ರ್ಯೋತ್ಸವ ಸಂಭ್ರಮ




» ದಾವಣಗೆರೆ

ನಗರದ ನಿಟ್ಟುವಳ್ಳಿಯವ ಜ್ಞಾನಭಾರತಿ ವಿದ್ಯಾಲಯದಲ್ಲಿ ಆಯೋಜಿಸಲಾಗಿದ್ದ 78ನೇ ವರ್ಷದ ಸ್ವಾತಂತ್ರ್ಯ ದಿನಾಚರಣೆಯ ಧ್ವಜಾರೋಣವನ್ನು ಪತ್ರಿಕೆಯ ವರದಿಗಾರರಾದ ಹುನುಮಂತಪ್ಪ ಹಾಲಿವಾಣ ಇವರು ನೇರವೇರಿಸಿದರು. ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಶಾಲಾ ಕಾರ್ಯದರ್ಶಿ ಮಲ್ಲೇಶ್ ಶ್ಯಾಗಲೆ ಮಾತನಾಡಿ ಶಿಕ್ಷಕರು ಮತ್ತು ಪೋಷಕರು ಮಕ್ಕಳಿಗೆ ಶಿಕ್ಷಣದ ಜೊತೆಯಲ್ಲಿ ಸಂಸ್ಕಾರವನ್ನು ಕಲಿಸಿಕೊಡಬೇಕು. ತಮ್ಮ ಮಕ್ಕಳು ಸಮಾಜ ಸೇವೆಯಲ್ಲಿ ದೇಶಕ್ಕೆ ಉತ್ತಮ ಕೊಡುಗೆ ನೀಡಬೇಕೆಂದು ತಿಳಿಸಿದರು. ಕಾರ್ಯಕ್ರದಲ್ಲಿ ಜಯಶ್ರೀ ಬಿ. ಎನ್, ಶಿಕ್ಷಕ ಭಾರ್ಗವ ಹೆಚ್.ಎಂ, ಶಿಕ್ಷಕಿ ಕವಿತಾ ಹಾಗೂ ಇನ್ನಿತರರು ಉಪಸ್ಥಿತರಿದ್ದರು.

# ಬಾಲ್ಯ ವಿವಾಹ ತಡೆಗಟ್ಟುವಲ್ಲಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಅಗತ್ಯ

» ಚಿತ್ರದುರ್ಗ

ಇತ್ತೀಚಿನ ದಿನಗಳಲ್ಲಿ ಜಿಲ್ಲೆಯಲ್ಲಿ ಬಾಲ್ಯ ವಿವಾಹ, ಬಾಲತಾಯಂದಿರ ಸಂಖ್ಯೆ ಹೆಚ್ಚಾಗುತ್ತಿದ್ದು, ಅದನ್ನು ತಡೆಹಿಡಿಯುವ ನಿಟ್ಟಿನಲ್ಲಿ ವಿದ್ಯಾರ್ಥಿಗಳಲ್ಲಿ ಜಾಗೃತಿ ಅಗತ್ಯವಾಗಿದೆ ಎಂದು ಜಿಲ್ಲಾ ಮಹಿಳಾ ಸಬಲೀಕರಣ ಘಟಕದ ಡಿ.ಗೀತಾ ಹೇಳಿದರು.




ಹೊಸದುರ್ಗದ ತೋಟದ ರಾಮಯ್ಯ ಗೌರಮ್ಮ ಬಾಲಿಕ ಪ್ರೌಢಶಾಲೆಯಲ್ಲಿ ಶುಕ್ರವಾರ ಭೇಟಿ ಬಚಾವೋ ಭೇಟಿ ಪಡಾವೋ ಕಾರ್ಯಕ್ರಮದಲ್ಲಿ ಅವರು ಮಾತನಾಡಿದರು.

ಮಕ್ಕಳ ಸುರಕ್ಷತೆಗಾಗಿ ಸುರಕ್ಷಿತ ಸ್ಪರ್ಶ ಮತ್ತು ಅಸುರಕ್ಷಿತ ಸ್ಪರ್ಶ ಇವುಗಳ ವ್ಯತ್ಯಾಸ ತಿಳಿಸಿ ಹೇಳಿದರು.

ಮಹಿಳೆ ಮತ್ತು ಮಕ್ಕಳ ಮೇಲೆ ನಡೆಯುತ್ತಿರುವ ಲೈಂಗಿಕ ದೌರ್ಜನ್ಯ ತಡೆಯುವ ನಿಟ್ಟಿನಲ್ಲಿ ಮಕ್ಕಳ ಸಹಾಯವಾಣಿ ಸಂಖ್ಯೆ 1098 ಹಾಗೂ ಮಹಿಳೆಯರ ಮತ್ತು ಮಕ್ಕಳ ಮಾರಾಟ ನಿಷೇಧ ಕಾಯ್ದೆ ಬಗ್ಗೆ ಮಾಹಿತಿ ನೀಡಿದ ಅವರು, ಹೆಣ್ಣು ಮಕ್ಕಳ ಭ್ರೂಣ ಹತ್ಯೆ ತಡೆಯುವ ನಿಟ್ಟಿನಲ್ಲಿ ಎಲ್ಲರೂ ಕೈಜೋಡಿಸಬೇಕು ಎಂದು ಜಾಗೃತಿ ಮೂಡಿಸಿದರು. ಕಾರ್ಯಕ್ರಮದಲ್ಲಿ ಶಾಲೆಯ ಮುಖ್ಯ ಶಿಕ್ಷಕ ಕಿರಣ್ ಕುಮಾರ್ ಹಾಗೂ ಸಹ ಶಿಕ್ಷಕರು ಮತ್ತು ಮಹಿಳಾ ಸಾಂತ್ವನ ಕೇಂದ್ರ ಸಿಬ್ಬಂದಿಗಳು ಹಾಜರಿದ್ದರು.

## ಪ್ರಮುಖ ಸುದ್ದಿ

### ಮುಂಗಾರು ಬೆಳೆ ಸಮೀಕ್ಷೆ ಜಾಗೃತಿ ರಥಯಾತ್ರೆಗೆ ಶಾಸಕ ಟಿ.ರಘುಮೂರ್ತಿ ಚಾಲನೆ

# ಪಾರದರ್ಶಕತೆ, ಪ್ರಾಮಾಣಿಕತೆಯಿಂದ ಕಾರ್ಯನಿರ್ವಹಿಸಿ

» ಚಳ್ಳಕೆರೆ

ಕೃಷಿ ಇಲಾಖೆ ರೈತ ಸಮುದಾಯಕ್ಕೆ ನ್ಯಾಯಯುತವಾಗಿ ಬೆಳೆ ಪರಿಹಾರವನ್ನು ನೀಡುವ ನಿಟ್ಟಿನಲ್ಲಿ ಪಾರದರ್ಶಕತೆಯನ್ನು ಕಂಡುಕೊಳ್ಳಬೇಕಿದೆ. ಗ್ರಾಮೀಣ ಭಾಗದಲ್ಲಿ ಕೃಷಿಕರು ತಮ್ಮ ಜಮೀನುಗಳಿಗೆ ಮಾಡಿದ ಬಿತ್ತನೆ ಬಗ್ಗೆ ಸರಿಯಾದ ಮಾಹಿತಿ ಸಂಗ್ರಹಿಸಿ ಯಾಫ್ ಮೂಲಕ ದಾಖಲಿಸಬೇಕು. ಇದರಲ್ಲಿ ಯಾವುದೇ ಲೋಪಉಂಟಾಗದಂತೆ ಮುನ್ನೆಚ್ಚರಿಕೆ ವಹಿಸಿ ಎಂದು ಕ್ಷೇತ್ರದ ಶಾಸಕ ಟಿ.ರಘುಮೂರ್ತಿ ತಿಳಿಸಿದರು.

ಅವರು, ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಮುಂಗಾರು ಬೆಳೆ ಸಮೀಕ್ಷೆ 2024–25ನೇ ಸಾಲಿನ ಮೊಬೈಲ್ ಯಾಫ್ ಮಾಹಿತಿ ರಥಕ್ಕೆ ಚಾಲನೆ ನೀಡಿ ಮಾತನಾಡಿದರು. ಸರ್ಕಾರ ಗ್ರಾಮೀಣ ಭಾಗಗಳಲ್ಲಿ ಹಲವಾರು ತಾಂತ್ರಿಕ ಸಮಸ್ಯೆಯಿಂದ ರೈತರ ಜಮೀನಲ್ಲಿರುವ ಬೆಳಗಳನ್ನು ದಾಖಲು ಮಾಡುವಲ್ಲಿ ಅನೇಕ ತಪ್ಪುಗಳು ಕಂಡುಬಂದಿವೆ. ಇದರಿಂದ ಕಷ್ಟದಲ್ಲಿರುವ ರೈತ ಮತ್ತೊಮ್ಮೆ ಸಂಕಷ್ಟಕ್ಕೆ ಈಡಾಗುತ್ತಾನೆ. ಕೃಷಿ ಇಲಾಖೆ ರೈತರ ಪಾಲಿನ ಬೆಳಕಾಗಬೇಕೆಂದರು.



**ಚಳ್ಳಕೆರೆ ನಗರದ ಬಿಎಂ ಸರ್ಕಾರಿ ಪ್ರೌಢಶಾಲಾ ಮೈದಾನದಲ್ಲಿ ಮುಂಗಾರು ಬೆಳೆ ಸಮೀಕ್ಷೆ 2024–25ನೇ ಸಾಲಿನ ಮೊಬೈಲ್ ಯಾಫ್ ಮಾಹಿತಿ ರಥಕ್ಕೆ ಶಾಸಕ ಟಿ.ರಘುಮೂರ್ತಿ ಚಾಲನೆ ನೀಡಿದರು.**

ಸಹಾಯಕ ಕೃಷಿ ನಿರ್ದೇಶಕ ಜೆ.ಅಶೋಕ್ ಮಾತನಾಡಿ, ತಾಲ್ಲೂಕಿನಾದ್ಯಂತ ಕಳೆದ ಎರಡು ದಿನಗಳ ಹಿಂದೆ ಉತ್ತಮ ಮಳೆಯಾಗಿದೆ. ಕುಂಠಿತಗೊಂಡ ಬಿತ್ತನೆ ಕಾರ್ಯಕ್ಕೆ ಮರುಚಾಲನೆ ದೊರೆತಂತಾಗಿದೆ. ಕೃಷಿ ಇಲಾಖೆ ಮುಂಗಾರು ಬೆಳೆ ಸಮೀಕ್ಷೆಗೆ ನೂತನ ತಾಂತ್ರಿಕತೆಯಿಂದ ಕೂಡಿದ ಯಾಪ್‌ನನ್ನು ಬಳಕೆಗೆ ತಂದಿದೆ. ಇಲಾಖೆಯ ವಾಹನದ ಮೂಲಕವೇ ಪ್ರತಿಗ್ರಾಮಕ್ಕೆ ಭೇಟಿ ನೀಡಿ ಅಲ್ಲಿ ದಾಖಲಾತಿಗಳ ಜಾಗೃತಿ ಮೂಡಿಸಲಾಗುವುದು ಎಂದರು.

ತಾಲ್ಲೂಕು ಗ್ಯಾರಂಟಿ ಸಮಿತಿ ಅಧ್ಯಕ್ಷ ಗದ್ದಿಗೆತಿಪ್ಪೇಸ್ವಾಮಿ, ಗುಜ್ಜಾರಪ್ಪ, ಚೌಳೂರುಬಸವರಾಜು, ಇಒ ಶಶಿಧರ, ಬಿಇಒ ಕೆ.ಎಸ್.ಸುರೇಶ್, ಡಿವೈಎಸ್ಪಿ ಟಿ.ಬಿ.ರಾಜಣ್ಣ, ಪೌರಾಯುಕ್ತ ಎಚ್.ಜೆ.ಜಗರೆಡ್ಡಿ, ನಗರಸಭಾ ಸದಸ್ಯ ಎಂ.ಜೆ.ರಾಘವೇಂದ್ರ, ಟಿ.ಮಲ್ಲಿಕಾರ್ಜುನ್, ಎನ್.ಮಂಜುನಾಥ ಮುಂತಾದವರು ಉಪಸ್ಥಿತರಿದ್ದರು.

## ಫಾಸ್ಟ್ ನ್ಯೂಸ್

### ದೊಡ್ಡ ಉಳ್ಳಾರ್ತಿ ರಾಯಣ್ಣ ಪ್ರತಿಮೆ ಸ್ಥಾಪನೆ ಗೊಂದಲ: ಡಿವೈಎಸಿ ಸಭೆ

» ಮೊದಲ ಪುಟದಿಂದ

ಗ್ರಾಮದಲ್ಲಿದ್ದ ಹಳೇ ವಿಎಲ್‌ಡಬ್ಲ್ಯೂ ಕ್ವಾಟ್ರಸ್ ಶಿಥಿಲಗೊಂಡು ಬಿದ್ದು ಹೋಗಿದೆ. ಆ ಜಾಗದಲ್ಲೇ ಪ್ರತಿಮೆ ನಿರ್ಮಾಣಕ್ಕೆ ಅವಕಾಶ ಕೋರಿದ್ದೇವೆ. ಜೊತೆಯಲ್ಲೇ ಕ್ರಾಂತಿವೀರ ಸಂಗೊಳ್ಳಿರಾಯಣ್ಣ ವೃತ್ತ ಸ್ಥಾಪಿಸಬೇಕು ಎಂದು ಮನವಿ ಮಾಡಿದ್ದರು.

ವಾಲ್ಮೀಕಿ ಸಮುದಾಯದ ಪರವಾಗಿ ಗ್ರಾಮ ಪಂಚಾಯಿತಿ ಅಧ್ಯಕ್ಷೆ ಕರಿಯಮ್ಮ, ಸದಸ್ಯೆ ಬೋರಯ್ಯ, ಕರಿಯಮ್ಮ, ಚಂದ್ರಣ್ಣ, ಯರಗುಂಟಪ್ಪ ಮುಂತಾದವರು ವೀರಸಂಗೊಳ್ಳಿರಾಯಣ್ಣ ಪ್ರತಿಮೆ ಸ್ಥಾಪನೆಗೆ ನಮ್ಮದು ಯಾವುದೇ ತಕರಾರು ಇಲ್ಲ. ಆದರೆ, ಕೆಲವೇ ಅಡಿಗಳ ದೂರದಲ್ಲಿ ವಾಲ್ಮೀಕಿಯವರ ಮೂರ್ತಿ ಇದ್ದು, ಮುಖ್ಯ ರಸ್ತೆ ಮತ್ತು ಸಮುದಾಯದ ಹಟ್ಟಿಯಲ್ಲಿ ನಿರ್ಮಿಸಿಕೊಳ್ಳಲು ನಮ್ಮದು ಯಾವುದೇ ಅಭ್ಯಂತರವಿಲ್ಲವೆಂದು ತಿಳಿಸಿದ್ದಾರೆ. ಈ ಬಗ್ಗೆ ಮಾಹಿತಿ ನೀಡಿದ ತಹಶೀಲ್ದಾರ್ ರೇಹಾನ್‌ಪಾಷ, ಡಿವೈಎಸ್ಪಿ ಟಿ.ಬಿ.ರಾಜಣ್ಣ, ಎರಡೂ ಸಮುದಾಯದ ಮುಖಂಡರೊಂದಿಗೆ ಸೌಹಾರ್ಧಿತವಾಗಿ ಚರ್ಚೆ ನಡೆಸಲಾಗಿದೆ. ಈಗಿರುವ ಸ್ಥಿತಿಯನ್ನೇ ಮುಂದುವರೆಸಿಕೊಂಡು ಹೋಗಲು ನಿರ್ಧರಿಸಿದೆ. ಮತ್ತೊಮ್ಮೆ ಎರಡೂ ಸಮುದಾಯಗಳ ಮುಖಂಡರನ್ನು ಚರ್ಚಿಸಿ, ಸ್ಥಳಕ್ಕೆ ಭೇಟಿ ನೀಡಿ ತೀರ್ಮಾನಿಸಲಾಗುವುದು ಎಂದರು.

### ದೀಕ್ಷಾಭೂಮಿ ಯಾತ್ರೆಗೆ ಅನುಯಾಯಿಗಳಿಂದ ಅರ್ಜಿ ಆಹ್ವಾನ

» ದಾವಣಗೆರೆ

ಪ್ರಸಕ್ತ ಸಾಲಿನಲ್ಲಿ ಮಹಾರಾಷ್ಟ್ರದ ನಾಗಪುರದ ದೀಕ್ಷಾಭೂಮಿ ಯಾತ್ರೆಗೆ ತೆರಳ ಬಯಸುವ ಡಾ॥ ಬಿ.ಆರ್.ಅಂಬೇಡ್ಕರ್ ಅವರ ಅನುಯಾಯಿ ಯಾತ್ರಾರ್ಥಿಗಳಿಗೆ ಬಸ್ ವ್ಯವಸ್ಥೆಯನ್ನು ಸಮಾಜ ಕಲ್ಯಾಣ ಇಲಾಖೆಯಿಂದ ಕಲ್ಪಿಸಲಾಗುತ್ತಿದೆ. ದೀಕ್ಷಾ ಭೂಮಿಗೆ ಭೇಟಿ ನೀಡುವ ಯಾತ್ರಾರ್ಥಿಗಳು ಸಮಾಜ ಕಲ್ಯಾಣ ಇಲಾಖೆಯ ವೆಬ್ ಸೈಟ್ ಲಿಂಕ್ : (https://swdservices.karnataka.nic.in) ನಲ್ಲಿ ಆನ್ ಲೈನ್ ಮೂಲಕ ಅರ್ಜಿಯನ್ನು ಆಗಸ್ಟ್ 31 ರೊಳಗಾಗಿ ಸಲ್ಲಿಸಬೇಕು. ಆಸಕ್ತರು ನೊಂದಣಿ ಮಾಡಿಕೊಂಡು ಸ್ವೀಕೃತಿ ಹಾಗೂ ಅಗತ್ಯ ದಾಖಲೆಗಳೊಂದಿಗೆ ಆಯಾ ತಾಲ್ಲೂಕಿನ ಸಮಾಜ ಕಲ್ಯಾಣ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಗೆ ಸಲ್ಲಿಸಲು ಜಂಟಿ ನಿರ್ದೇಶಕ ನಾಗರಾಜ್ ತಿಳಿಸಿದ್ದಾರೆ.

### ಅವಧಿ ವಿಸ್ತರಣೆ

» ದಾವಣಗೆರೆ

ಕೇಂದ್ರ ಸರ್ಕಾರದ ಸಾಮಾಜಿಕ ನ್ಯಾಯ ಮತ್ತು ಸಬಲೀಕರಣ ಇಲಾಖೆಯಿಂದ ಪ್ರಸಕ್ತ ಸಾಲಿನಲ್ಲಿ ನ್ಯಾಷನಲ್ ಇ-ಸ್ಕಾಲರ್ ಶಿಪ್ ಪಡೆಯಲು ವಿದ್ಯಾಭ್ಯಾಸ ಮಾಡುವ ವಿಕಲಚೇತನ ವಿದ್ಯಾರ್ಥಿಗಳಿಗೆ ಆನ್ ಲೈನ್ ಮೂಲಕ ಅರ್ಜಿ ಅವಧಿಯನ್ನು ವಿಸ್ತರಿಸಲಾಗಿದೆ. ಪ್ರೀ-ಮೆಟ್ರಿಕ್ ಮತ್ತು ಪೋಸ್ಟ್ ಮೆಟ್ರಿಕ್ (ಮೆಟ್ರಿಕ್ ಪೂರ್ವ 9ನೇ ಮತ್ತು 10ನೇ ತರಗತಿ ವಿದ್ಯಾರ್ಥಿಗಳು ಆನ್ ಲೈನ್ ಅರ್ಜಿಗಳನ್ನು ಸಲ್ಲಿಸಲು ಆಗಸ್ಟ್ 31 ರವರೆಗೆ ಅವಧಿ ವಿಸ್ತರಿಸಲಾಗಿದ್ದು, ಮೆಟ್ರಿಕ್ ನಂತರದಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಅಕ್ಟೋಬರ್ 31 ರವರೆಗೆ ಅವಧಿ ವಿಸ್ತರಣೆ ಮಾಡಲಾಗಿದೆ ಎಂದು ಜಿಲ್ಲಾ ಅಂಗವಿಕಲರ ಮತ್ತು ಹಿರಿಯ ನಾಗರಿಕರ ಸಬಲೀಕರಣಾಧಿಕಾರಿ ಡಾ.ಕೆ.ಕೆ.ಪ್ರಕಾಶ್ ತಿಳಿಸಿದ್ದಾರೆ.

### ನೇರ ಸಂದರ್ಶನ

» ದಾವಣಗೆರೆ

ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಮಾದರಿ ವೃತ್ತಿ ಕೇಂದ್ರ, ದಾವಣಗೆರೆ ಇವರ ವತಿಯಿಂದ ಆಗಸ್ಟ್ 19 ರಂದು ಬೆಳಗ್ಗೆ 10 ಗಂಟೆಗೆ ಜಿಲ್ಲಾ ಉದ್ಯೋಗ ವಿನಿಮಯ ಕೇಂದ್ರ, ಕೊಠಡಿ ಸಂಖ್ಯೆ-51, ಜಿಲ್ಲಾಡಳಿತ ಭವನ, ದಾವಣಗೆರೆ ಇಲ್ಲಿ ನೇರ ಸಂದರ್ಶನ ಆಯೋಜಿಸಲಾಗಿದೆ. ವಾಕ್ ಇನ್ ಇಟಿಟರ್ ವೀವ್ ಖಾಸಗಿ ಸಂಸ್ಥೆಗಳು ಭಾಗವಹಿಸುತ್ತಿದ್ದು, ತಮ್ಮ ಸಂಸ್ಥೆಯಲ್ಲಿ ಖಾಲಿ ಇರುವ ಹುದ್ದೆಗಳಿಗೆ ಪಿಯುಸಿ ಮತ್ತು ಪದವಿಯಲ್ಲಿ ವಿದ್ಯಾರ್ಹತೆ ಹೊಂದಿರುವ ಅಭ್ಯರ್ಥಿಗಳನ್ನು ನೇಮಕಾತಿ ಮಾಡಿಕೊಳ್ಳಲಿದ್ದಾರೆ. ಆಸಕ್ತ ಅಭ್ಯರ್ಥಿಗಳು ಕನಿಷ್ಠ 4 ಬಯೋಡಾಟಾ ಮತ್ತು ಆಧಾರ್ ನಂಬರ್ ನೊಂದಿಗೆ ಹಾಜರತಕ್ಕದ್ದು, ಹೆಚ್ಚಿನ ಮಾಹಿತಿಗೆ: 8105122556, 08192-259446 ಸಂಪರ್ಕಿಸಬಹುದೆಂದು ಜಿಲ್ಲಾ ಉದ್ಯೋಗಾಧಿಕಾರಿ ರವೀಂದ್ರ ತಿಳಿಸಿದ್ದಾರೆ.

### ವಿದ್ಯುತ್ ವ್ಯತ್ಯಯ

» ದಾವಣಗೆರೆ

ಜಲಸಿರಿ ಯೋಜನೆ ಯಡಿಯಲ್ಲಿ ನಿರಂತರ ಶುದ್ಧ ಕುಡಿಯುವ ನೀರಿನ ಸರಬರಾಜು ಯೋಜನೆ ಕಾಮಗಾರಿಯನ್ನು ಹಮ್ಮಿಕೊಂಡಿರುವುದರಿಂದ ಆ.17 ರಂದು ಬೆಳಿಗ್ಗೆ 10 ರಿಂದ ಸಂಜೆ 4 ಗಂಟೆಯವರೆಗೆತ್ರಿಶೂಲ್ ಫೀಡರ್,ಕೆ.ಬಿ.ಬಡಾವಣೆ, ಲಾಯರ್‌ರಸ್ತೆ, ದೀಕ್ಷಿತ್‌ರಸ್ತೆ, ಬಿಲಾಲ್‌ಕಾಂಪೌಂಡ್, ಅಶೋಕ್‌ರಸ್ತೆ, ಕಿರುವಾಡಿ ಲೇಔಟ್, ಪ್ರೆಸ್‌ಕ್ಲಬ್, ನಾಯ್ಡು ಹೋಟಲ್, ರಾಘವೇಂದ್ರ ದೇವಸ್ಥಾನ ರಸ್ತೆ ಗಾಂಧಿ ಸರ್ಕಲ್‌ನಿಂದ ಈರುಳ್ಳಿ ಮಾರ್ಕೆಟ್ ಹಾಗೂ ಸುತ್ತ ಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯವಾಗಲಿದೆ ಎಂದು ಬೆಸ್ಕಾಂ ತಿಳಿಸಿದೆ.

# ಕೊಳಗೇರಿ ಮಂಡಳಿಯಿಂದ ಹಕ್ಕುಪತ್ರ ವಿತರಣೆ

» ಚಿತ್ರದುರ್ಗ

ಹಿಂದಿನ ಶಾಸಕರು ನಗರವನ್ನು ಕೆಡಿಸಿ ಕಲ್ಲು ಹಾಕಿದ್ದಾರೆ. ರಿಪೇರಿ ಮಾಡುವ ಶಕ್ತಿ ನಿಮ್ಮಲ್ಲಿದೆ. ನಗರಸಭೆ, ಜಿಲ್ಲಾಡಳಿತ, ಜನಸಮೂಹವೆ ನಿಮ್ಮ ಬೆಂಬಲಕ್ಕಿದೆ ಎಂದು ಆದಿಜಾಂಬವ ಅಭಿವೃದ್ದಿ ನಿಗಮದ ಅಧ್ಯಕ್ಷ ಜಿ.ಎಸ್.ಮಂಜುನಾಥ್ ಶಾಸಕ ಕೆ.ಸಿ.ವೀರೇಂದ್ರ ಪಪ್ಪಿಯವರಲ್ಲಿ ಭಿನ್ನವಿಸಿಕೊಂಡರು.

ಕೆಳಗೋಟೆಯಲ್ಲಿರುವ ಬೇಡರಕಣ್ಣಪ್ಪ ದೇವಸ್ಥಾನದ ಪಕ್ಕದಲ್ಲಿನ ಅಂಬೇಡ್ಕರ್ ಸಮುದಾಯ ಭವನದಲ್ಲಿ ಕರ್ನಾಟಕ ಕೊಳಗೇರಿ ಅಭಿವೃದ್ದಿ ಮಂಡಳಿಯಿಂದ ಶುಕ್ರವಾರ ಹಮ್ಮಿಕೊಳ್ಳಲಾಗಿದ್ದ ಹಕ್ಕುಪತ್ರ ವಿತರಣಾ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದರು.

ಅವೈಜ್ಞಾನಿಕ ಯುಜಿಡಿ.ಗಳು ಬದಲಾಗಬೇಕು. ನಗರದ ಬಹುತೇಕ ಕಡೆ ಪಿಟ್‌ಗಳಿವೆ. ಕೆನೆಕ್ಷನ್ ಇಲ್ಲ. ಹಾಗಾಗಿ ಎಲ್ಲಾ ಕಡೆ ಯುಜಿಡಿ. ಚೇಂಬರ್‌ಗಳು ತುಂಬಿ ರಸ್ತೆಯಲ್ಲಿ ನೀರು ಹರಿಯುತ್ತಿದೆ. ಮಣ್ಣಿನ ರೋಡುಗಳೆ ಕಣ್ಣಿಗೆ ಕಾಣದಂತಾಗಿದೆ. ಎಲ್ಲಾ ಕಡೆ ಸಿಮೆಂಟ್ ರೋಡ್‌ಗಳಾಗಿವೆ. ಅದಕ್ಕಾಗಿ ಹದಗೆಟ್ಟಿರುವ ನಗರವನ್ನು ಸರಿಮಾಡಿ ಎಂದು ಶಾಸಕರಲ್ಲಿ ಜಿ.ಎಸ್. ಮಂಜುನಾಥ್ ಮನವಿ ಮಾಡಿದರು.

ಭೀಮಪ್ಪನಾಯಕ ನಗರಸಭೆ ಅಧ್ಯಕ್ಷರಾಗಿದ್ದಾಗ ಊರು ಕಟ್ಟೋಣ ಜಮೀನು ಕೊಡಿ ಎಂದು ಕೇಳಿದ್ದರಿಂದ



ಪರಿಶಿಷ್ಟ ಜಾತಿ ಪರಿಶಿಷ್ಟ ವರ್ಗದವರು ನಾಲ್ಕುನೂರು, ಐದು ನೂರು ರೂ.ಗೆ ಎಕರೆಯಂತೆ ಭೂಮಿ ನೀಡಿದವರು ಇಂದು ಅನಾಥರಾಗಿದ್ದಾರೆ. ಚಿತ್ರದುರ್ಗ ಶಾಸಕರನ್ನು ಬದಲಾವಣೆ ಮಾಡಬೇಕೆಂದು ತೀರ್ಮಾನಿಸಿ ಎಲ್ಲಾ ಜಾತಿ ವರ್ಗದವರು ಒಟ್ಟಾಗಿ ನಿಮ್ಮನ್ನು ಗೆಲ್ಲಿಸಿದ್ದಾರೆ. ಉಚಿತ ಗ್ಯಾರಂಟಿ ಸ್ಕೀಂಗಳನ್ನು ನಿಲ್ಲಿಸಲ್ಲ ಎಂದು ರಾಜ್ಯದ ಮುಖ್ಯಮಂತ್ರಿ ಸಿದ್ದರಾಮಯ್ಯ, ಉಪ ಮುಖ್ಯಮಂತ್ರಿ ಡಿ.ಕೆ.ಶಿವಕುಮಾರ್ ಇವರುಗಳು ರಾಜ್ಯದ ಜನತೆಗೆ ಅಭಯ ನೀಡಿದ್ದಾರೆ. ಸಮುದಾಯ ಭವನದ ಮೇಲ್ಭಾಗದಲ್ಲಿ ಗ್ರಂಥಾಲಯ ಮಾಡೋಣ ಇದರಿಂದ ಮಕ್ಕಳ ಓದಿಗೆ ಅನುಕೂಲವಾಗುತ್ತದೆ. ಅದಕ್ಕೆ ಬೇಕಾದ ನೆರವು ನೀಡುವುದಾಗಿ ತಿಳಿಸಿದರು.

ಹತ್ತು ಮಂದಿಯಿರುವ ಸ್ತ್ರೀಶಕ್ತಿ ಸಂಘಕ್ಕೆ ಎರಡುವರೆ ಲಕ್ಷ ರೂ.ನೆರವು ನೀಡುವ ಅವಕಾಶವಿದೆ. ನೇರ ಸಾಲ ಕೊಡಬಹುದು. ಜಮೀನು ಇದ್ದವರಿಗೆ ಬೋರ್‌ವೆಲ್ ಕೊರೆಸಿ ಕೊಡೋಣ. ಚಿಕ್ಕ ವಯಸ್ಸಿನ ಶಾಸಕ ಕೆ.ಸಿ.ವೀರೇಂದ್ರಪಪ್ಪಿರವರಿಗೆ ರಾಜಕೀಯದಲ್ಲಿ ಒಳ್ಳೆ ಭವಿಷ್ಯವಿದೆ. ಲಿಂಗಾಯಿತ ಮತಗಳನ್ನು ಕಾಂಗ್ರೆಸ್‌ಗೆ ತರುವ ಶಕ್ತಿ ಅವರಲ್ಲಿದೆ. ಎಲ್ಲರೂ ಶಾಸಕರ ಬೆಂಬಲಕ್ಕೆ ನಿಲ್ಲಬೇಕು ಎಂದು ಹೇಳಿದರು.

ಫಲಾನುಭವಿಗಳಿಗೆ ಹಕ್ಕುಪತ್ರ ವಿತರಿಸಿ ಮಾತನಾಡಿದ ಶಾಸಕ ಕೆ.ಸಿ.ವೀರೇಂದ್ರಪಪ್ಪಿ ಸ್ಲಂ ಬೋರ್ಡ್‌ನಿಂದ 48 ಫಲಾನುಭವಿಗಳು ಸಿ.ಕೆ.ಪುರದಿಂದ ಆಯ್ಕೆಯಾಗಿದ್ದಾರೆ.


ದೇವಸ್ಥಾನ ಕಟ್ಟುವುದಕ್ಕಿಂತ ಗ್ರಂಥಾಲಯಗಳನ್ನು ತೆರೆದರೆ ಪುಸ್ತಕಗಳನ್ನು ಓದುವುದರಿಂದ ಮಕ್ಕಳ ಜ್ಞಾನ ಹೆಚ್ಚುತ್ತದೆ. ವಿಜೃಂಭಣೆಯಿಂದ ಹುಟ್ಟುಹಬ್ಬವನ್ನು ಆಚರಿಸಿಕೊಳ್ಳುವ ಬದಲು ಗ್ರಂಥಾಲಯಕ್ಕೆ ಒಂದು ಪುಸ್ತಕ ಕೊಡಿ ಎಂದು ಸಿ.ಕೆ.ಪುರ ನಿವಾಸಿಗಳಲ್ಲಿ ವಿನಂತಿಸಿದರು.

ನನ್ನ ಉದ್ಯಮ ನೋಡಿಕೊಳ್ಳಲು ಬೇರೆ ಬೇರೆ ಕಡೆ ಹೋಗುವುದು ಅನಿವಾರ್ಯ. ತಿಂಗಳಲ್ಲಿ ಹದಿನೆಂಟರಿಂದ ಇಪ್ಪತ್ತು ದಿನ ಕ್ಷೇತ್ರದಲ್ಲಿರುತ್ತೇನೆ. ನನ್ನ ವ್ಯವಹಾರ ನೋಡಿಕೊಂಡು ಇದ್ದಿದ್ದರೆ ಸುಖವಾಗಿರುತ್ತದೆ. ಜನಸೇವೆ ಮಾಡಬೇಕೆಂಬ ಹಂಬಲದಿಂದ ರಾಜಕೀಯಕ್ಕೆ ಬಂದಿದ್ದೇನೆ. ಇಲ್ಲೊಂದು ವ್ಯಾಯಾಮ ಶಾಲೆ ತೆರೆಯಬೇಕೆಂಬ ಬೇಡಿಕೆಯಿದೆ. ಆರೋಗ್ಯಪೂರ್ಣವಾಗಿರಿ. ಕೆಟ್ಟ ಚಟಗಳಿಗೆ ಬಲಿಯಾಗಬೇಡಿ ಎಂದು ಕರೆ ನೀಡಿದರು.

ನಗರಾಭಿವೃದ್ದಿ ಪ್ರಾಧಿಕಾರದ ಸದಸ್ಯ ಹೆಚ್.ಅಂಜಿನಪ್ಪ, ನಗರಸಭೆ ಮಾಜಿ ಸದಸ್ಯರುಗಳಾದ ಪ್ರಕಾಶ್, ತಿಪ್ಪೇಸ್ವಾಮಿ, ಅಂಗಡಿ ಮಂಜುನಾಥ್, ಗ್ರಾಮಾಂತರ ಬ್ಲಾಕ್ ಕಾಂಗ್ರೆಸ್ ಅಧ್ಯಕ್ಷ ಆರ್.ಪ್ರಕಾಶ್, ತುಮಕೂರು ನಗರಸಭೆ ಸದಸ್ಯ ಅಬ್ದುಲ್, ಕೆಡಿಪಿ. ಸದಸ್ಯ ಕೆ.ಬಿ.ನಾಗರಾಜ್, ವಿಜಯಣ್ಣ, ಸುಧಾಕರ್, ನ್ಯಾಯವಾದಿ ಬೀಸ್ನಳ್ಳಿ ಜಯಣ್ಣ ವೇದಿಕೆಯಲ್ಲಿದ್ದರು.



ಚಿತ್ರದುರ್ಗ ಐಶ್ವರ್ಯ ಫೋರ್ಟ್ ಹಿಂಭಾಗ ಎಸ್.ಆರ್.ಲೇಔಟ್‌ನಲ್ಲಿರುವ ಚೌಡೇಶ್ವರಿ ದೇವಸ್ಥಾನದಲ್ಲಿ ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಕಣ್ಣು ಕೋರೈಸುವಂತೆ ಅಲಂಕರಿಸಲಾಗಿತ್ತು. ಕಮಲದ ಹೂವು, ಗುಲಾಬಿ ಸೇರಿದಂತೆ ನಾನಾ ಬಗೆಯ ಪುಷ್ಪಗಳಿಂದ ಚೌಡೇಶ್ವರಿಯನ್ನು ಸಿಂಗರಿಸಿ ಪೂಜಿಸಲಾಯಿತು. ಇಲ್ಲಿಯೂ ಕೂಡ ಅಪಾರ ಸಂಖ್ಯೆಯಲ್ಲಿ ಭಕ್ತರು ಆಗಮಿಸಿ ಪೂಜೆ ಸಲ್ಲಿಸಿದರು.



ಚಿತ್ರದುರ್ಗ ಕೆಳಗೋಟೆಯಲ್ಲಿರುವ ಕೊಲ್ಲಾಪುರದಮ್ಮನ ದೇವಸ್ಥಾನದಲ್ಲಿ ವರಮಹಾಲಕ್ಷ್ಮಿ ಹಬ್ಬದ ಅಂಗವಾಗಿ ಸಿಂಗರಿಸಿ ಪೂಜಿಸಲಾಯಿತು. ಬಗೆ ಬಗೆಯ ಹೂವು ಹಾರ ಹಾಗೂ ಆಭರಣಗಳಿಂದ ಕೊಲ್ಲಾಪುರದಮ್ಮನವನ್ನು ಅಲಂಕರಿಸಲಾಗಿತ್ತು. ವಿಶೇಷವಾಗಿ ವರಮಹಾಲಕ್ಷ್ಮಿ ಹಬ್ಬ ಮಹಿಳೆಯರದ್ದೆ ಆಗಿರುವುದರಿಂದ ಅಪಾರ ಸಂಖ್ಯೆಯಲ್ಲಿನಾರಿಯರು ಎಲ್ಲಾ ದೇವಸ್ಥಾನಗಳಿಗೂ ತೆರಳಿ ಪೂಜೆ ಸಲ್ಲಿಸಿ ಸಂಭ್ರಮಿಸಿದರು.



ಚಿತ್ರದುರ್ಗ ವರಮಹಾಲಕ್ಷ್ಮಿ ಹಬ್ಬದ ಪ್ರಯುಕ್ತ ನಗರ ಪೊಲೀಸ್ ಠಾಣೆ ಆವರಣದಲ್ಲಿರುವ ಕಣಿವೆ ಮಾರಮ್ಮನಿಗೆ ವಿಶೇಷವಾಗಿ ಅಲಂಕರಿಸಿ ಪೂಜಿಸಲಾಯಿತು. ಬಣ್ಣ ಬಣ್ಣದ ಹೂವು ಹಾಗೂ ಹಾರ. ಹಸಿರುಪತ್ರೆಯಿಂದ ನಯನ ಮನೋಹರವಾಗಿ ಕಣಿವೆಮಾರಮ್ಮನನ್ನು ಸಿಂಗರಿಸಲಾಗಿತ್ತು. ಬೆಳಗಿನಿಂದ ಸಂಜೆಯತನಕ ನೂರಾರು ಭಕ್ತರು ಧಾವಿಸಿ ಕಣಿವೆಮಾರಮ್ಮನಿಗೆ ಭಕ್ತಿ ಸಮರ್ಪಿಸಿದರು.

## ನಗರ ಸ್ವಚ್ಛತೆಗೆ ಮೊದಲ ಆದ್ಯತೆ, ಪೌರ ಕಾರ್ಮಿಕರು ಜವಾಬ್ದಾರಿ ನಿರ್ವಹಿಸಲು ಸೂಚನೆ



» ದಾವಣಗೆರೆ

ಪಾಲಿಕೆಯ ಕಾರ್ಮಿಕರು, ಚಾಲಕರು ನಗರ ಸ್ವಚ್ಛತೆಯಲ್ಲಿ ಜವಾಬ್ದಾರಿಯಿಂದ ಕರ್ತವ್ಯ ನಿರ್ವಹಿಸಿ ಸ್ವಚ್ಛತೆ ಕಾಪಾಡುವಂತೆ ಲೋಕಸಭಾ ಸದಸ್ಯರಾದ ಡಾ ಪ್ರಭಾ ಮಲ್ಲಿಕಾರ್ಜುನ್ ಕರೆ ನೀಡಿದರು.

ಶುಕ್ರವಾರ (16) ಮಹಾನಗರಪಾಲಿಕೆಯ ಅವರಗೊಳ್ಳ ತ್ಯಾಜ್ಯ ವಿಲೇವಾರಿ ಜಮೀನಿನಲ್ಲಿ ಸ್ವಚ್ಛಭಾರತ್ ಮಿಷನ್ ಯೋಜನೆಯಡಿ ರೂ.21.94 ಕೋಟಿ ವೆಚ್ಚದಲ್ಲಿ ನಿರ್ಮಿಸಲಾದ ಘನತ್ಯಾಜ್ಯ ವಸ್ತು ಸಂಸ್ಕರಣೆಗಾಗಿ ಪ್ರೊ□□□ಸೆಸಿಂಗ್ ಷೆಡ್, ಕಾಂಕ್ರೀಟ್ ರಸ್ತೆ, ಚರಂಡಿ, ಸ್ಯಾನಿಟರಿ ಲ್ಯಾಂ□□ಫಿಲ್ ಹಾಗೂ ಇತರೆ ಸಿವಿಲ್ ಕಾಮಗಾರಿಗಳು, ಸೆಗ್ರಿಗೇಶನ್, ಬೇಲಿಂಗ್ ಯಂತ್ರೋಪಕರಣಗಳನ್ನೊಳಗೊಂಡ ವಿಂಡ್ರೋ ಕಾಂಪೋ□ಸ್ಟಿಂಗ್ ಘಟಕ ಹಾಗೂ 15 ನೇ ಹಣಕಾಸು ಆಯೋಗದ ಅನುದಾನದಲ್ಲಿತ್ಯಾಜ್ಯಸಂಗ್ರಹಣೆಹಾಗೂಸಾಗಾಣಿಕೆಗಾಗಿಖರೀದಿಸಲಾದ ಆಟೋ ಟಿಪ್ಪರ್, ಟ್ರ್ಯಾಕ್ಟರ್, ಸಕ್ಕಿಂಗ್ ಯಂತ್ರಗಳನ್ನು ಉದ್ಘಾಟಿಸಿ ಮಾತಾನಾಡಿದರು. ನಗರದಲ್ಲಿನ ಸಮರ್ಪಕ ತ್ಯಾಜ್ಯ ನಿರ್ವಹಣೆಗಾಗಿ ಮಹಾನಗರಪಾಲಿಕೆಯ ತ್ಯಾಜ್ಯ ಸಂಗ್ರಹಣಾ ವಾಹನಗಳು ಹಸಿ ಮತ್ತು ಒಣ ತ್ಯಾಜ್ಯವನ್ನು ಪ್ರತ್ಯೇಕವಾಗಿ ಸಂಗ್ರಹಿಸುತ್ತಿದ್ದು, ಸಾರ್ವಜನಿಕರು ತ್ಯಾಜ್ಯವನ್ನು ರಸ್ತೆ, ಚರಂಡಿ, ಖಾಲಿ ನಿವೇಶನಗಳಲ್ಲಿ ಎಸೆಯದೇ ಹಸಿಕಸ, ಒಣ ಕಸ ಹಾಗೂ ಅಪಾಯಕಾರಿ ತ್ಯಾಜ್ಯಗಳಾಗಿ ವಿಂಗಡಿಸಿ ಪ್ರತ್ಯೇಕವಾಗಿ ನೀಡಬೇಕೆಂದರು. ತ್ಯಾಜ್ಯವಿಲೇವಾರಿ ಜಮೀನಿನಲ್ಲಿ ಕಳೆದ ಮೇ ತಿಂಗಳಲ್ಲಿ ಸಂಭವಿಸಿದ ಆಕಸ್ಮಿಕ ಬೆಂಕಿಯಿಂದ ಬೆಳೆಹಾನಿಯಿಂದ ನಷ್ಟ ಅನುಭವಿಸಿದ ರೈತರಿಗೆ ಪರಿಹಾರವನ್ನು ವಿತರಿಸಿದರು.

ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರ ಸ್ವಾಮಿ ಮಾತನಾಡಿ ನಗರದ ತ್ಯಾಜ್ಯ ಸಂಸ್ಕರಣೆಗಾಗಿ ಉತ್ತಮ ಸಂಸ್ಕರಣಾ ಘಟಕ ನಿರ್ಮಿಸಿದ್ದು, ಎ□□ಜಿಟಿ ಆದೇಶದಂತೆ ನಗರದಲ್ಲಿ ಉತ್ಪತ್ತಿಯಾಗುವ ಪೂರ್ಣ ಪ್ರಮಾಣದ ತ್ಯಾಜ್ಯವನ್ನು ವೈಜ್ಞಾನಿಕವಾಗಿ ಸಂಸ್ಕರಿಸಿ ಗೊಬ್ಬರವಾಗಿ ಪರಿವರ್ತಿಸುವುದರಿಂದ ಉತ್ತಮ ಗೊಬ್ಬರ ದೊರೆಯಲಿದ್ದು, ತ್ಯಾಜ್ಯ ಸಂಸ್ಕರಣಾ ಘಟಕ ಸ್ಥಾಪನೆಗೆ ಉತ್ತಮ ಸಹಕಾರ ನೀಡಿರುವ ಅವರಗೊಳ್ಳ ಹಾಗೂ ಸ್ಥಳೀಯ ರೈತರಿಗೆ ಒದಗಿಸಲಾಗುವುದೆಂದು, ಕಸ ನಿರ್ವಹಣೆ ಪ್ರತಿಯೊಬ್ಬರ ಜವಾಬ್ದಾರಿಯಾಗಿದ್ದು ನಗರದ ಸ್ವಚ್ಛತೆಗಾಗಿ ಎಲ್ಲ ಸಾರ್ವಜನಿಕರು ಸಹಕಾರ ನೀಡುವಂತೆ ತಿಳಿಸಿದರು.

# ಕುರಿಹಟ್ಟಿಯ ಮೇಲೆ ಚಿರತೆ ದಾಳಿ: 5 ಕುರಿ ಸಾವು

» ಚಳ್ಳಕೆರೆ

ತಾಲ್ಲೂಕಿನ ವಿವಿಧ ಭಾಗಗಳಲ್ಲಿ ಕಾಡುಪ್ರಾಣಿಗಳು ಗ್ರಾಮಗಳಿಗೆ ನುಗ್ಗಿ ಜನ, ಜಾನುವಾರುಗಳ ಮೇಲೆ ಅಕ್ರಮಣ ನಡೆಸುತ್ತಿರುವುದರಿಂದ ಜನರು ಭಯಭೀತರಾಗಿದ್ದಾರೆ. ಆದರೆ, ಈ ಘಟನೆ ಮಾಸುವಮುನ್ನವೆತಾಲ್ಲೂಕಿನಪರಶುರಾಮಪುರ ಹೋಬಳಿಯ ಹಾಲಿಗೊಂಡನಹಳ್ಳಿ ಗ್ರಾಮದ ತಿಪ್ಪೇಸ್ವಾಮಿ ಎಂಬುವವರು ಮನೆಯ ಪಕ್ಕದಲ್ಲೇ ಕುರಿಗಳನ್ನು ಸಾಕಲು ಕುರಿಹಟ್ಟಿಯನ್ನು ಕಟ್ಟಿಕೊಂಡು ಹತ್ತು ಕುರಿಗಳನ್ನು ಜೋಪಾನ ಮಾಡುತ್ತಿದ್ದ ಜೀವನೋಪಾಯಕ್ಕಾಗಿ ಸುಮಾರು 50 ಸಾವಿರ ವೆಚ್ಚದಲ್ಲಿ 10 ಕುರಿಗಳನ್ನು ತಂದು ಜೀವನ ನಿರ್ವಹಿಸುತ್ತಿದ್ದ. ಗುರುವಾರ ತಡರಾತ್ರಿ ಚಿರತೆಯೊಂದು ಕುರಿಹಟ್ಟಿಗೆ ದಾಳಿ ನಡೆಸಿ ಐದು ಕುರಿಗಳನ್ನು ಕೊಂದಿದ್ದಲ್ಲದೆ, ಐದು ಕುರಿಗಳನ್ನು ಗಾಯಗೊಳಿಸಿ ಪರಾರಿಯಾಗಿದೆ.

ಕುರಿಹಟ್ಟಿಯ ಮೇಲೆ ದಿಢೀರನೆ ದಾಳಿ ನಡೆಸಿ ಕುರಿಗಳ ಕಾರಣಹೋಮ ನಡೆಸಿದ ಚಿರತೆಯನ್ನು ಕೂಡಲೇ ಅರಣ್ಯಾಧಿಕಾರಿಗಳು ಸೆರೆಹಿಡಿಯಬೇಕೆಂದು ತಿಪ್ಪೇಸ್ವಾಮಿ ಆಗ್ರಹಿಸಿದ್ದಾರೆ. ಜೊತೆಯಲ್ಲೇ ಗ್ರಾಮೀಣ ಭಾಗಗಳಲ್ಲಿ ಈ ದಾಳಿಯಿಂದ ಭಯದ ವಾತಾವರಣ ಉಂಟಾಗಿದ್ದು, ಸಂಜೆ ವೇಳೆ ಜನಜಾನುವಾರುಗಳು ಓಡಾಟ ನಡೆಸುವುದು ಕಷ್ಟವಾಗಿದೆ. ಪೊಲೀಸ್ ಮತ್ತು ಅರಣ್ಯ ಇಲಾಖೆ ಅಧಿಕಾರಿಗಳು ಚಿರತೆ ಪತ್ತೆಗೆ ಕ್ರಮವಹಿಸುವಂತೆ ಮನವಿ ಮಾಡಿದ್ದಾರೆ.

ಪಶುವೈದ್ಯ ಇಲಾಖೆಯ ಸಹಾಯಕ ನಿರ್ದೇಶಕ ಡಾ.ರೇವಣ್ಣ ಮಾತನಾಡಿ, ಹಾಲಿಗೊಂಡನಹಳ್ಳಿ ಚಿರತೆದಾಳಿ ಕುರಿತಂತೆ ಮಾಹಿತಿ ಬಂದಿದ್ದು, ಪಶುವೈದ್ಯ ಡಾ.ಶಿವಪ್ರಕಾಶ್ ಘಟನೆ ಸ್ಥಳಕ್ಕೆ ಭೇಟಿ ನೀಡಿ ಮೃತಪಟ್ಟ ಐದು ಕುರಿಗಳ ಮರಣೋತ್ತರ ಪರೀಕ್ಷೆ ನಡೆಸಿದ್ದಾರೆ. ಗಾಯಗೊಂಡ ಕುರಿಗಳಿಗೆ ಚಿಕಿತ್ಸೆ ನೀಡಿದ್ದಾರೆ. ಮೃತಪಟ್ಟ ಐದು ಕುರಿಗಳಿಗೆ ತಲಾ 5 ಸಾವಿರದಂತೆ 25 ಸಾವಿರ ಹಣ ಇಲಾಖೆಯಿಂದ ನೀಡಲಾಗುವುದು ಎಂದರು.

## ಪ್ರಮುಖ ಸುದ್ದಿ

# ಹಿರಿಯರ ತ್ಯಾಗ ಬಲಿದಾನಗಳಿಂದ ದೇಶಕ್ಕೆ ಸ್ವಾತಂತ್ರ್ಯ

» ಚಿತ್ರದುರ್ಗ

ಬ್ರಿಟೀಷರ ವಿರುದ್ದ ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟ ಹಿರಿಯರ ತ್ಯಾಗ ಬಲಿದಾನಗಳಿಂದ ದೇಶದ 140 ಕೋಟಿ ಜನ ಸ್ವತಂತ್ರ ಭಾರತೀಯರಾಗಿದ್ದಾರೆಂದು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಸಂಸ್ಥಾಪಕ ಕಾರ್ಯದರ್ಶಿ ಹಾಗೂ ಹೊಳಲ್ಕೆರೆ ಶಾಸಕ ಡಾ.ಎಂ.ಚಂದ್ರಪ್ಪ ನುಡಿದರು.

ಚಳ್ಳಕೆರೆ ಟೋಲ್‌ಗೇಟ್ ಸಮೀಪವಿರುವ ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯಲ್ಲಿ ಗುರುವಾರ ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡಿದರು.

ಮಹಾತ್ಮಗಾಂಧಿ, ನೆಹರು, ಸುಭಾಶ್‌ಚಂದ್ರ ಬೋಸ್, ಲಾಲ್‌ಬಹದ್ದೂರ್‌ಶಾಸ್ತ್ರಿ, ಸರ್ದಾರ್‌ವಲ್ಲಭಭಾಯಿ ಪಟೇಲ್ ಇನ್ನು ಅನೇಕರ ಹೋರಾಟದ ಹಾದಿಯನ್ನುಎಲ್ಲರೂಸ್ಮರಿಸಿಕೊಳ್ಳಬೇಕಾದ ಸುದಿನ. ಯಾವುದೇ ಫಲಾಪೇಕ್ಷೆಯಿಲ್ಲದೆ ಪುಣ್ಯಸಾರ್ಥಕ ಕೆಲಸ ಮಾಡಬೇಕೆಂಬ ಉದ್ದೇಶವಿಟ್ಟುಕೊಂಡು ದೇವರಾಜ್ ಅರಸ್ ಶಿಕ್ಷಣ ಸಂಸ್ಥೆಯನ್ನು ಕಟ್ಟಿದ್ದೇವೆ. ಇಲ್ಲಿ ಶಿಕ್ಷಣ ಪಡೆದ ಸಾವಿರಾರು ವಿದ್ಯಾರ್ಥಿಗಳು ದೇಶ-ವಿದೇಶಗಳಲ್ಲಿದ್ದಾರೆ. ಭಾರತ



ಸರ್ಕಾರ ಅನುಮತಿ ನೀಡಿರುವುದರಿಂದ ಅಮೃತ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಆರಂಭಗೊಂಡಿದೆ. ದೇಶಕ್ಕೆ ಅತ್ಯುತ್ತಮ ಪ್ರಧಾನಿ ಸಿಕ್ಕಿದ್ದಾರೆ. ಮಕ್ಕಳನ್ನು ಸತ್ಪ್ರಜೆಗಳನ್ನಾಗಿ ರೂಪಿಸಿ ದೇಶಕ್ಕಾಗಿ ಪ್ರಾಣತೆತ್ತ ಹಿರಿಯರ ಇತಿಹಾಸಗಳನ್ನು ಪರಿಚಯಿಸುವ ಹೊಣೆಗಾರಿಕೆ ಶಿಕ್ಷಕರುಗಳ ಮೇಲಿದೆ ಎಂದು ತಿಳಿಸಿದರು.

ತಂದೆ-ತಾಯಿಗಳು, ಪೋಷಕ ವರ್ಗ, ಶಿಕ್ಷಣ ನೀಡಿದ ಸಂಸ್ಥೆಗೆ ಒಳ್ಳೆಯ ಕೀರ್ತಿ ತರುವ ಮಕ್ಕಳಾಗಬೇಕು. ಸ್ವಾತಂತ್ರ್ಯ ಪೂರ್ವದಲ್ಲಿ ಶೇ.30 ರಷ್ಟು ಶಿಕ್ಷಣವಂತರಿದ್ದರು.

ಈಗ ಶಿಕ್ಷಣವಂತರ ಸಂಖ್ಯೆ ಶೇ.90 ಕ್ಕೆ ಏರಿದೆ ಎಂದು ಶಾಸಕ ಡಾ.ಎಂ.ಚಂದ್ರಪ್ಪ ಹೇಳಿದರು. ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಮುಖ್ಯ ಕಾರ್ಯನಿರ್ವಹಣಾಧಿಕಾರಿ ಎಂ.ಸಿ.ರಘುಚಂದನ್ ಮಾತನಾಡಿ ಬ್ರಿಟೀಷರ ವಿರುದ್ದ ದೇಶಕ್ಕಾಗಿ ಹೋರಾಡಿ ಮಡಿದ ಮಹನೀಯರನ್ನು ಸ್ಮರಿಸುವ ಅತ್ಯಂತ ಪವಿತ್ರವಾದ ದಿನ ಆ.15. ಹೋರಾಟಕ್ಕಾಗಿ ಪ್ರಾಣ ತೆತ್ತ ಹಿರಿಯರನ್ನು ಭಾರತದಪ್ರತಿಯೊಬ್ಬರುಸ್ಮರಿಸಿಕೊಳ್ಳಬೇಕು. ಯಾವುದೇ ಜಾತಿ ಧರ್ಮದ ಬೇಧವಿಲ್ಲದೆ ಎಲ್ಲಾ ಧರ್ಮದವರು ಒಟ್ಟಿಗೆ ಕೂಡಿ 78 ನೇ ಸ್ವಾತಂತ್ರ್ಯೋತ್ಸವ ಆಚರಿಸುತ್ತಿದ್ದಾರೆಂದರೆ ಅದಕ್ಕೆ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್ ನೀಡಿರುವ ಸಂವಿಧಾನ ಕಾರಣ ಎಂದು ನೆನಪಿಸಿಕೊಂಡರು.

ವಿಜ್ಞಾನ-ತಂತ್ರಜ್ಞಾನದಲ್ಲಿ ಬಲಶಾಲಿಯಾಗಿರುವ ಭಾರತ ಅಮೇರಿಕಾ, ರಷ್ಯ, ಆಸ್ಟ್ರೇಲಿಯಾ, ನ್ಯೂಜಿಲ್ಯಾಂಡ್ ಸೇರಿದಂತೆ ಇನ್ನು ಬೇರೆ ಬೇರೆ ರಾಷ್ಟ್ರಗಳಿಗೆ ಪೈಪೋಟಿ ನೀಡುವಷ್ಟು ಸದೃಢವಾಗಿ ಬೆಳೆದಿದೆ. ಪ್ರಕೃತಿ ಆಯುರ್ವೇದಿಕ್ ಮೆಡಿಕಲ್ ಕಾಲೇಜು ಕೂಡ ಆರಂಭಗೊಂಡಿದೆ. ಗುರು-ಹಿರಿಯರು, ತಂದೆ-ತಾಯಿಗಳನ್ನು ಗೌರವಿಸುವುದನ್ನು ಮಕ್ಕಳು ಕಲಿಯಬೇಕೆಂದು ಎಂ.ಸಿ.ರಘುಚಂದನ್ ತಿಳಿಸಿದರು.

ದೇವರಾಜ್ ಅರಸ್ ಶಿಕ್ಷಣ ಸಂಸ್ಥೆ ಆಡಳಿತಾಧಿಕಾರಿ ಶ್ರೀಮತಿ ಹೆಚ್. ಚಂದ್ರಕಲಾ, ಶ್ರೀಮತಿ ವೈಷ್ಣವಿ ರಘುಚಂದನ್, ಕು.ಆರ್ನಾ, ನವೀನ್, ಶ್ರೀಮತಿ ಚೈತ್ರಾ, ಎಸ್.ಎಲ್.ವಿ. ಪಿ.ಯು.ಕಾಲೇಜು ಪ್ರಾಂಶುಪಾಲರಾದ ಮಹಂತೇಶ್, ಪಿ.ಯು. ಕಾಲೇಜು ಪ್ರಾಚಾರ್ಯರಾದ ಕೇಶವಮೂರ್ತಿ, ಪ್ರಾಧ್ಯಾಪಕರು, ಶಿಕ್ಷಕ ವೃಂದದವರು, ಅಮೃತ ಆಯುರ್ವೇದಿಕ್ ಮೆಡಿಕಲ್ ಕಾಲೇಜಿನ ಸಿಬ್ಬಂದಿಗಳು, ಬೋಧಕೇತರರು

# ಸಂಕೋಲೆಯಿಂದ ಹೊರಬಂದ ಅಪೂರ್ವ ದಿನ

» ಚಿತ್ರದುರ್ಗ

ಸ್ವಾತಂತ್ರ್ಯೋತ್ಸವವು ರಾಷ್ಟ್ರಕ್ಕೆ ಮಹತ್ವದ ದಿನಾಚರಣೆ. ದೇಶವು ಮಹಾನ್ ನಾಯಕರ ತ್ಯಾಗ ಬಲಿದಾನ ಹೋರಾಟದ ಮೂಲಕ ದಾಸ್ಯದ ಸಂಕೋಲೆಯಿಂದ ಹೊರಬಂದ ಅಪೂರ್ವ ದಿನವಾಗಿದೆ ಎಂದು ಶ್ರೀ ಮುರುಘರಾಜೇಂದ್ರ ಬೃಹನ್ಮಠ ಆಡಳಿತ ಮಂಡಳಿಯ ಅಧ್ಯಕ್ಷ ಶಿವಯೋಗಿ ಸಿ.ಕಳಸದ ಹೇಳಿದರು.

ಶ್ರೀ ಮಲ್ಲಿಕಾರ್ಜುನ ಮುರುಘರಾಜೇಂದ್ರ ತಾಂತ್ರಿಕ ಮಹಾವಿದ್ಯಾಲಯದ ಆವರಣದಲ್ಲಿ ಆಯೋಜಿಸಲಾಗಿದ್ದ 78ನೇ ಸ್ವಾತಂತ್ರ್ಯೋತ್ಸವದಲ್ಲಿ ಧ್ವಜಾರೋಹಣ ನೆರವೇರಿಸಿ ಮಾತನಾಡಿದ ಅವರು, ಸ್ವಾತಂತ್ರ್ಯದ ಹಬ್ಬ ನಾಡಿಗೆ ಮಾತ್ರವಲ್ಲ ಪ್ರಪಂಚದಾದ್ಯಂತ ಆಚರಿಸಲಾಗುತ್ತಿದೆ. ಈ ಸಂದರ್ಭದಲ್ಲಿ ಸ್ವಾತಂತ್ರ್ಯಕ್ಕಾಗಿ ಹೋರಾಡಿದ ಮಹಾನ್ ನಾಯಕರ ತ್ಯಾಗ ಬಲಿದಾನಗಳನ್ನು ಸ್ಮರಿಸಿಕೊಳ್ಳಬೇಕು. ನಮ್ಮದು ಹೆಮ್ಮೆಯ ನಾಡು. ಇಂದಿನ ಯುವಪೀಳಿಗೆ ನಾಡಿನ ಉತ್ತಮ ಪ್ರಜೆಯಾಗಿ ರೂಪುಗೊಂಡು ಸಮಾಜಕ್ಕೆ ಉತ್ತಮ ಕಾಣಿಕೆ ನೀಡುವ ಜವಾಬ್ದಾರಿಯನ್ನು ಹೊರಬೇಕು ಎಂದರು.

ವಿದ್ಯಾರ್ಥಿಗಳು ಉಜ್ವಲ ಭವಿಷ್ಯ ರೂಪಿಸಿಕೊಳ್ಳಬೇಕು. ಯುವಪೀಳಿಗೆ ದೇಶದ ಅತಿ ದೊಡ್ಡ ಶಕ್ತಿಯಾಗಿದೆ. ಶ್ರೀಮಠವು ಶತಮಾನಗಳ ಇತಿಹಾಸವನ್ನು ಹೊಂದಿದೆ. ಶ್ರೀಮಠದ ಹಿಂದಿನ ಪೂಜ್ಯರುಗಳು ಆರ್ಥಿಕ, ಶೈಕ್ಷಣಿಕ ಮತ್ತು ಸಾಮಾಜಿಕವಾಗಿ ಸಮಾಜಕ್ಕೆ ಉತ್ತಮ ಕೊಡುಗೆ ನೀಡಿದ್ದಾರೆ. ಸರ್ಕಾರ ನಮ್ಮನ್ನು ಶ್ರೀಮಠ ಮತ್ತು ವಿದ್ಯಾಪೀಠಕ್ಕೆ ನೇಮಕ ಮಾಡಿದಾಗಿನಿಂದ ಅನೇಕ ಜನಪರ ಕಾರ್ಯಗಳನ್ನು ಕೈಗೊಳ್ಳಲಾಗಿದೆ ಎಂದರು.




ಶ್ರೀಮಠಕ್ಕೆ ಸಂಬಂಧಿಸಿದ ಅನೇಕ ಶಾಖಾಮಠಗಳ ಜೀರ್ಣೋದ್ಧಾರ ಕಾರ್ಯಗಳನ್ನು ಕೈಗೊಂಡಿದ್ದೇವೆ. ಸಮಸ್ಯೆಗಳಿಗೆ ಒಳಗಾಗಿದ್ದ ಕೆಲವು ಆಸ್ತಿಗಳನ್ನು ರಕ್ಷಣೆ ಮಾಡಲಾಗುತ್ತಿದೆ. ಅನೇಕ ಶಾಲಾ ಕಾಲೇಜುಗಳ ಕಟ್ಟಡ ಕಾಮಗಾರಿಗಳು ತ್ವರಿತಗತಿಯಲ್ಲಿ ನಡೆಯುತ್ತಿವೆ. ಎಸ್.ಜೆ.ಎಂ. ನರ್ಸಿಂಗ್ ಕಾಲೇಜಿಗೆ ನೂತನ ಕಟ್ಟಡಕ್ಕೆ ಶಂಕುಸ್ಥಾಪನೆ ಮಾಡಲಾಗಿದ್ದು, ಹತ್ತು ತಿಂಗಳಲ್ಲಿ ಕಟ್ಟಡ ಕಾಮಗಾರಿ ಪೂರೈಸಲು ಸೂಚಿಸಲಾಗಿದೆ ಎಂದು ತಿಳಿಸಿದರು.

ತರೀಕೆರೆಯಲ್ಲಿ ಹೊಸದಾಗಿ ಫಾರ್ಮಸಿ ಕಾಲೇಜು ಆರಂಭಿಸುತ್ತಿದ್ದು, ಈ ವರ್ಷದಿಂದಲೇ ಪ್ರವೇಶ ಪ್ರಕ್ರಿಯೆಗೆ ಚಾಲನೆ ನೀಡಲಾಗಿದೆ. ಇವೆಲ್ಲಕ್ಕು ಆಡಳಿತ ಮಂಡಳಿ ಸದಸ್ಯರ, ಸಂಸ್ಥೆಯ ಸಮಸ್ತ ನೌಕರರ ಸಹಕಾರ ಇರುವುದು ಸಂತಸವೇ ಸರಿ. ಮುಂದಿನ ದಿನಗಳಲ್ಲಿ ಸಂಸ್ಥೆಯು ಹತ್ತು ಹಲವು ಯೋಜನೆಗಳ ಮೂಲಕ ಶಿಕ್ಷಣ ಸಂಸ್ಥೆಗಳನ್ನು ಬೆಳೆಸುವ ಯೋಜನೆ ಹಾಕಿಕೊಳ್ಳಲಾಗಿದೆ. ಗ್ರಾಮೀಣ ಭಾಗದ ಮಕ್ಕಳಿಗೆ ಉತ್ತಮ ಶಿಕ್ಷಣ ನೀಡಲು ಒತ್ತು ನೀಡಲಾಗುವುದು ಎಂದು ಹೇಳಿದರು.

ಆಡಳಿತ ಮಂಡಳಿ ಸದಸ್ಯ ಡಾ.ಬಸವಕುಮಾರ ಸ್ವಾಮೀಜಿ ಮಾತನಾಡಿ, ನೌಕರರ ಶ್ರಮದಿಂದ ವಿದ್ಯಾಪೀಠ ಇಷ್ಟೊಂದು ಎತ್ತರಕ್ಕೆ ಬೆಳೆದಿದೆ. ವ್ಯಕ್ತಿ ತನಗಾಗಿ ಬದುಕಬಾರದು ದೇಶಕ್ಕಾಗಿ ಬದುಕಬೇಕು. ಕ್ರಿಯಾಶೀಲತೆಯಿಂದ ನಮ್ಮ ಬದುಕನ್ನು ರಾಷ್ಟ್ರಕ್ಕಾಗಿ ಮೀಸಲಿಡಬೇಕು. ಅದು ಮೌಲ್ಯಯುತವಾಗಿರಬೇಕೆಂದರು.

ಸಂಸ್ಥೆಯ ಎಲ್ಲಾ ಶಾಲಾ ಕಾಲೇಜುಗಳ ಮುಖ್ಯಸ್ಥರುಗಳು ವೇದಿಕೆಯಲ್ಲಿದ್ದರು.

ವಿದ್ಯಾಪೀಠದವಿವಿಧಶಾಲಾಕಾಲೇಜುಗಳಲ್ಲಿ ಸೇವೆ ಸಲ್ಲಿಸಿ ನಿವೃತ್ತರಾದ ನೌಕರರಿಗೆ, ಪಿಎಚ್.ಡಿ. ಪದವಿ ಪಡೆದವರಿಗೆ, ವಿವಿಧ ಕ್ಷೇತ್ರಗಳಲ್ಲಿ ಸಾಧನೆ ಮಾಡಿದವರಿಗೆ, ರ್‍ಯಾಂಕ್ ವಿಜೇತ ವಿದ್ಯಾರ್ಥಿಗಳಿಗೆ ಅಧ್ಯಕ್ಷರು ಮತ್ತು ಶ್ರೀಗಳು ಶಾಲು ಹೊದಿಸಿ ಸನ್ಮಾನಿಸಿ ಗೌರವಿಸಿದರು.

ವಿದ್ಯಾಸಂಸ್ಥೆಯ ಶಾಲಾಕಾಲೇಜುಗಳ 14 ತಂಡಗಳು ಆಕರ್ಷಕ ಪಥಸಂಚಲನ ನಡೆಸಿದವು. ಅತ್ಯುತ್ತಮ ಪಥ ಸಂಚಲನ ಪ್ರದರ್ಶಿಸಿದ ಪ್ರೌಢಶಾಲಾ ವಿಭಾಗದಲ್ಲಿ ಎಸ್.ಜೆ.ಎಂ. ಸಿ.ಬಿ.ಎಸ್.ಇ. ಶಾಲೆ – ಪ್ರಥಮ, ಬೃಹನ್ಮಠ ಪಿಯು ಕಾಲೇಜು – ದ್ವಿತೀಯ ಮತ್ತು ಎಸ್.ಜೆ.ಎಂ. ಪ್ರೌಢಶಾಲೆ – ತೃತೀಯ ಹಾಗೂ ಕಾಲೇಜು ವಿಭಾಗದಲ್ಲಿ ಎಸ್.ಜೆ.ಎಂ. ಫಾರ್ಮಸಿ ಕಾಲೇಜು – ಪ್ರಥಮ, ಎಸ್.ಜೆ.ಎಂ. ಕಲಾ, ವಿಜ್ಞಾನ ಮತ್ತು ವಾಣಿಜ್ಯ ಕಾಲೇಜು ಚಂದ್ರವಳ್ಳಿ – ದ್ವಿತೀಯ ಮತ್ತು ಎಸ್.ಜೆ.ಎಂ. ನರ್ಸಿಂಗ್ ಕಾಲೇಜು – ತೃತೀಯ ಬಹುಮಾನ ನೀಡಲಾಯಿತು.

ನಂತರ ಶಾಲಾ ಕಾಲೇಜುಗಳ ವಿದ್ಯಾರ್ಥಿಗಳಿಂದ ದೇಶಭಕ್ತಿ ಸಾರುವ ಸಾಂಸ್ಕೃತಿಕ ಕಾರ್ಯಕ್ರಮಗಳು ಜರುಗಿದವು. ಎಸ್.ಜೆ.ಎಂ. ಸಿ.ಬಿ.ಎಸ್.ಇ. ಪ್ರೌಢಶಾಲೆಯ ಮೌಲ್ಯಶ್ರೀ, ಗೌತಮಿ, ಪ್ರಜ್ವಲ್, ಡ್ಯಾನಿಯಲ್ ಕಾರ್ಯಕ್ರಮ ನಿರೂಪಿಸಿದರು.

## ಫಾಸ್ಟ್ ನ್ಯೂಸ್

### ನುಲಿಯ ಚಂದಯ್ಯ ಜಯಂತಿ

» ದಾವಣಗೆರೆ

ಜಿಲ್ಲಾಡಳಿತ ವತಿಯಿಂದ ಆ.19 ಬೆಳಗ್ಗೆ 11.00 ಗಂಟೆಗೆ ನುಲಿಯ ಚಂದಯ್ಯ ಜಯಂತಿಯನ್ನು ಜಿಲ್ಲಾಡಳಿತ ಭವನದಲದಲ್ಲಿ ಹಮ್ಮಿಕೊಳ್ಳಲಾಗಿದೆ ಎಂದು ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರಾದ ರವೀಂದ್ರನ್ ತಿಳಿಸಿದ್ದಾರೆ.

### ಕಬೀರಾನಂದಾಶ್ರಮದಲ್ಲಿ ಶಿವಲಿಂಗಾನಂದ ಸ್ವಾಮಿಗಳಿಂದ ಧ್ವಜಾರೋಹಣ



» ಚಿತ್ರದುರ್ಗ

ಕಬೀರಾನಂದಾಶ್ರಮದಲ್ಲಿ ರಾಷ್ಟ್ರಧ್ವಜಾರೋಹಣ ನೆರವೇರಿಸುವ ಮೂಲಕ ಗುರುವಾರ ದೇಶದ 78 ನೇ ಸ್ವಾತಂತ್ರ್ಯೋತ್ಸವವನ್ನು ಆಚರಿಸಲಾಯಿತು.

ಕಬೀರಾನಂದಾಶ್ರಮದ ಶಿವಲಿಂಗಾನಂದ ಮಹಾಸ್ವಾಮಿಗಳು ರಾಷ್ಟ್ರಧ್ವಜಾರೋಹಣ ನೆರವೇರಿಸಿ ಮಾತನಾಡುತ್ತ ಬ್ರಿಟೀಷರನ್ನು ದೇಶದಿಂದ ಓಡಿಸಲು ಅನೇಕ ಹಿರಿಯರು ಪ್ರಾಣ ತ್ಯಾಗ ಮಾಡಿದ್ದರ ಪರಿಣಾಮವಾಗಿ ಇಂದು 78 ನೇ ಸ್ವಾತಂತ್ರ್ಯೋತ್ಸವನ್ನು ಆಚರಿಸುತ್ತಿದ್ದೇವೆ. ಅದೇ ರೀತಿ ಸಂವಿಧಾನಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್‌ರವರು ಸಂವಿಧಾನವನ್ನು ರಚಿಸಿ ದೇಶಕ್ಕೆ ಕೊಡುಗೆಯಾಗಿ ನೀಡಿದ್ದರಿಂದ ಯಾವುದೇ ಜಾತಿ ಧರ್ಮದ ತಾರತಮ್ಯವಿಲ್ಲದೆ ಎಲ್ಲರೂ ಸಹೋದರತ್ವ, ಸಹಬಾಳ್ವೆ ಜೀವನ ನಡೆಸುತ್ತಿದ್ದೇವೆಂದು ಹೇಳಿದರು.

ಮಕ್ಕಳು ಹೋರಾಟ ತ್ಯಾಗ ಮನೋಭಾವನೆಯನ್ನು ಬೆಳೆಸಿಕೊಂಡು ದೇಶಕ್ಕಾಗಿ ಹೋರಾಡಿದ ಹಿರಿಯರ ಬಲಿದಾನಗಳನ್ನು ತಿಳಿದುಕೊಂಡು ಪರೋಪಕಾರದ ಗುಣ ಬೆಳೆಸಿಕೊಳ್ಳಬೇಕು. ತಂದೆ–ತಾಯಂದಿರು ಕಷ್ಟಪಟ್ಟು ನಿಮ್ಮನ್ನು ಶಾಲೆಗೆ ಕಳಿಸುತ್ತಾರೆ. ಶಿಕ್ಷಣದ ಕಡೆ ಗಮನಕೊಟ್ಟು ಮುಂದೆ ಜೀವನದಲ್ಲಿ ಸತ್ಪ್ರಜೆಗಳಾಗಿ ಗುರು–ಹಿರಿಯರನ್ನು ಗೌರವಿಸುವ ಸಂಸ್ಕಾರವಂತರಾಗಿ. ದೇಶ ಸೇವೆ ಬಗ್ಗೆ ಸದ್ಭಾವನೆ ಮೂಡಿಸಿಕೊಳ್ಳಿ. ರಾಷ್ಟ್ರ ಉಳಿದರೆ ಎಲ್ಲರೂ ಉಳಿಯುತ್ತೇವೆಂದು ಮಕ್ಕಳಿಗೆ ಸ್ವಾಮೀಜಿ ಕರೆ ನೀಡಿದರು. ಮಂಜುನಾಥಗುಪ್ತ, ಡಿ.ಗೋಪಾಲಸ್ವಾಮಿ ನಾಯಕ, ಭದ್ರಾವತಿ ಶಾಖಾ ಮಠದ ಕಾರ್ಯದರ್ಶಿ ರಾಮಮೂರ್ತಿ ಸೇರಿದಂತೆ ನೂರಾರು ಮಕ್ಕಳು ಸ್ವಾತಂತ್ರ್ಯೋತ್ಸವದಲ್ಲಿ ಪಾಲ್ಗೊಂಡಿದ್ದರು. ವಿವಿಧ ವೇಷ ಭೂಷಣಗಳನ್ನು ಧರಿಸಿದ್ದ ಮಕ್ಕಳಿಂದ ಸಾಂಸ್ಕೃತಿಕ ಕಾರ್ಯಕ್ರಮ ನಡೆಯಿತು.

### ಉರ್ದು ಶಾಲೆಯಲ್ಲಿ ಸ್ವಾತಂತ್ರ್ಯೋತ್ಸವ ದಿನಾಚರಣೆ



» ಚಿತ್ರದುರ್ಗ

ಇಲ್ಲಿನಹಳೆಮಾಧ್ಯಮಿಕಶಾಲಾಆವರಣದಲ್ಲಿರುವ ಸರ್ಕಾರಿ ಉರ್ದು ಮಾದರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ದೇಶದ 78 ನೇ ಸ್ವಾತಂತ್ರ್ಯೋತ್ಸವವನ್ನು ಆಚರಿಸಲಾಯಿತು. ಕರ್ನಾಟಕ ರಾಜ್ಯ ಟಿಪ್ಪುಸುಲ್ತಾನ್ ಅಭಿಮಾನಿಗಳ ಮಹಾ ವೇದಿಕೆ ರಾಜ್ಯಾಧ್ಯಕ್ಷ ಟಿಪ್ಪುಖಾಸಿಂ ಆಲಿ ಧ್ವಜಾರೋಹಣ ನೆರವೇರಿಸಿ ಮಾತನಾಡುತ್ತ ಮಕ್ಕಳು ಶಿಕ್ಷಣದ ಜೊತೆ ದೇಶಭಕ್ತಿ, ದೇಶಾಭಿಮಾನ ಮೈಗೂಡಿಸಿಕೊಂಡು ದೇಶದ ಸ್ವಾತಂತ್ರ್ಯಕ್ಕಾಗಿ ಬ್ರಿಟೀಷರ ವಿರುದ್ದ ಹೋರಾಡಿದ ಅನೇಕ ಮಹನೀಯರ ಇತಿಹಾಸಗಳನ್ನು ತಿಳಿದುಕೊಳ್ಳಬೇಕೆಂದರು. ಶಾಲೆಯ ಎಸ್.ಡಿ.ಎಂ.ಸಿ. ಅಧ್ಯಕ್ಷ ಸೈಯದ್ ಇಸ್ಮಾಯಿಲ್ ಮಾತನಾಡಿ ಅನೇಕ ಮಹನೀಯರಹೋರಾಟತ್ಯಾಗಬಲಿದಾನದಿಂದಾಗಿ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದೆ. ಚಿಕ್ಕಂದಿನಿಂದಲೇ ಮಕ್ಕಳು ದೇಶಭಕ್ತಿ ಮೈಗೂಡಿಸಿಕೊಳ್ಳಬೇಕೆಂದು ತಿಳಿಸಿದರು. ಎಸ್.ಡಿ.ಎಂ.ಸಿ. ಉಪಾಧ್ಯಕ್ಷ ಆದಿಲ್, ಮುಖ್ಯ ಶಿಕ್ಷಕಿ ಉಮ್ಮಿ ಸುಮಯ್ಯ, ಶಿವಕುಮಾರ್, ಹರೀಶ್, ವೀರೇಂದ್ರಬಾಬು, ಆದಿಲ್‌ಷಾ ಹಾಗೂ ಶಿಕ್ಷಕ ವೃಂದದವರು ಮಕ್ಕಳು ಸ್ವಾತಂತ್ರ್ಯ ದಿನಾಚರಣೆಯಲ್ಲಿ ಪಾಲ್ಗೊಂಡಿದ್ದರು.

# ನಗರಂಗೆರೆ: ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ಪ್ಲಾಸ್ಟಿಕ್ ತ್ಯಜಿಸಿ ನೈರ್ಮಲ್ಯ ಸಂರಕ್ಷಿಸಿ ಅಂದೋಲನ

» ಚಳ್ಳಕೆರೆ

ಸರ್ಕಾರ ಕಳೆದ ಹಲವಾರು ವರ್ಷಗಳಿಂದ ಪ್ಲಾಸ್ಟಿಕ್ ಬ್ಯಾಗ್‌ಗಳನ್ನು ಬಳಸದಂತೆ ನಿಷೇದ ಹೇರಿದ್ದರೂ ಅವುಗಳ ಬಳಕೆ ಕಡಿಮೆಯಾಗಿಲ್ಲ. ಈ ನಿಟ್ಟಿನಲ್ಲಿ ಶಾಲಾ ಹಂತದಿಂದಲೇ ಪ್ಲಾಸ್ಟಿಕ್ ಬ್ಯಾಗ್ ತ್ಯಜಿಸಿ ಬಟ್ಟೆ ಬ್ಯಾಗ್‌ಗಳ ಉಪಯೋಗಿಸುವಂತೆ ಜಾಗೃತಿ ಮೂಡಿಸಲಾಗುತ್ತಿದೆ ಎಂದು ಸಾಫ್ಟ್‌ವೇರ್ ಇಂಜಿನಿಯರ್ ಕೆ.ಆರ್.ತಿಪ್ಪೇಸ್ವಾಮಿ ತಿಳಿಸಿದರು.

ಅವರು, ನಗರಂಗೆರೆ ಗ್ರಾಮ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲಾ ಆವರಣದಲ್ಲಿ 78ನೇ ಸ್ವಾತಂತ್ರ್ಯೋತ್ಸವ ಹಿನ್ನೆಲೆಯಲ್ಲಿ ಶಾಲೆಗೆ ಬೇಟಿ ನೀಡಿ ಬಟ್ಟೆ ಬ್ಯಾಗ್ ವಿತರಿಸಿ ಮಾತನಾಡಿದರು. ವಿದ್ಯಾರ್ಥಿಗಳು ಗ್ರಾಮದಲ್ಲಿ ಪೋಷಕರು ಹಾಗೂ ಸ್ನೇಹಿತರಿಗೆ ಬಟ್ಟೆ ಬ್ಯಾಗ್ ಉಪಯೋಗಿಸುವಂತೆ ಮನವಿ ಮಾಡಿಕೊಳ್ಳಬೇಕು ಎಂದರು.

ಇದೇ ಸಂದರ್ಭದಲ್ಲಿ ಗಾಯಿತ್ರಿ ಬಯೋಫೀಲ್ಸ್‌ನ ಮಾಲೀಕ ಸುಧಾಕರ್ ಶಾಲೆಯ ವಿದ್ಯಾರ್ಥಿಗಳಿಗೆ ಉಚಿತವಾಗಿ 100 ತಟ್ಟೆ ಹಾಗೂ ಲೋಟಗಳನ್ನು ವಿತರಿಸಿದರು. ವಿದ್ಯಾರ್ಥಿಗಳು ಶ್ರಮವಹಿಸಿ ಅಭ್ಯಾಸ ಮಾಡಬೇಕು ಪ್ರತಿನಿತ್ಯ ಶಾಲೆಗೆ ಆಗಮಿಸಿ ಶಿಕ್ಷಕರು ನೀಡುವ ಪಾಠವನ್ನು ಅರ್ಥೈಸಿಕೊಂಡು ಮುನ್ನಡೆಯಬೇಕು ಎಂದರು.




ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದ ಎಸ್‌ಡಿಎಂಸಿ ಅಧ್ಯಕ್ಷ ಮಂಜುನಾಥ ಮಾತನಾಡಿ, ಪ್ಲಾಸ್ಟಿಕ್ ಬಳಕೆಯಿಂದ ನೈರ್ಮಲ್ಯದ ಜೊತೆಗೆ ಆರೋಗ್ಯಕ್ಕೂ ತೊಂದರೆಯಾಗುವುದರಿಂದ ಇವುಗಳ ಬಳಕೆಯನ್ನು ತ್ಯಜಿಸಬೇಕು ಎಂದರು. ಶಾಲೆಗೆ ಉಚಿತವಾಗಿ ಬಟ್ಟೆ ಬ್ಯಾಗ್ ನೀಡಿದ ಹಾಗೂ ವಿದ್ಯಾರ್ಥಿಗಳಿಗೆ ತಟ್ಟೆ, ಲೋಟ ವಿತರಿಸಿದ ಇಬ್ಬರು ದಾನಿಗಳನ್ನು ಶಾಲೆಯ ಪರವಾಗಿ ಅಭಿನಂದಿಸುವುದಾಗಿ ತಿಳಿಸಿದರು.

ಮುಖ್ಯ ಶಿಕ್ಷಕ ನಾಗರಾಜು, ಸಹ ಶಿಕ್ಷಕರಾದ ರವಿಕುಮಾರ್, ಗೀತಾ, ನಿಂಗಮ್ಮ, ಪದ್ಮಾವತಿ, ಮಹಿಳಾ ಒಕ್ಕೂಟ ಸದಸ್ಯೆ ತ್ರಿವೇಣಿ, ಗ್ರಾಮದ ಮುಖಂಡ ಗೌಸೀಯಾರ್ ಮುಂತಾದವರು ಉಪಸ್ಥಿತರಿದ್ದರು.

# ಬೆಸ್ಕಾಂ ಚಳ್ಳಕೆರೆ ಉಪವಿಭಾಗದ ಕಾರ್ಯನಿರ್ವಾಹಕರಾಗಿ ಜಿ.ಶಿವಪ್ರಸಾದ್ ಅಧಿಕಾರ ಸ್ವೀಕಾರ



» ಚಳ್ಳಕೆರೆ

ಇಲ್ಲಿನ ಬೆಂಗಳೂರು ವಿದ್ಯುತ್ ಕಂಪನಿ ಉಪವಿಭಾಗದ ಸಹಾಯಕ ಕಾರ್ಯಪಾಲಕ ಅಭಿಯಂತರರಾಗಿ ಜಿ.ಶಿವಪ್ರಸಾದ್ ಶುಕ್ರವಾರ ಅಧಿಕಾರ ಸ್ವೀಕರಿಸಿದರು. ಮೊಳಕಾಲ್ಮೂರು ವಿಭಾಗದಲ್ಲಿ ಕಾರ್ಯನಿರ್ವಹಿಸುತ್ತಿದ್ದ ಇವರನ್ನು ಚಳ್ಳಕೆರೆಗೆ ವರ್ಗಾವಣೆ ಮಾಡಲಾಗಿದೆ.

ಈ ಹಿಂದೆ ಇಲ್ಲಿ ಕಾರ್ಯನಿರ್ವಹಿಸುತ್ತಿದ್ದ ಎನ್.ಎಸ್.ರಾಜುರವರನ್ನು ಮೊಳಕಾಲ್ಮೂರಿಗೆ ವರ್ಗಾವಣೆಯಾಗಿದ್ದು, ಅವರು ಇಲಾಖೆ ಹಾಗೂ ಸಿಬ್ಬಂದಿ ಪರವಾಗಿ ಜಿ.ಶಿವಪ್ರಸಾದರವರನ್ನು ಸ್ವಾಗತಿಸಿ, ಅಧಿಕಾರವನ್ನು ಹಸ್ತಾಂತರಿಸಿದರು. ಇದೇ ಸಂದರ್ಭದಲ್ಲಿ ಮಾತನಾಡಿದ ರಾಜು, ಕಳೆದ ಸುಮಾರು ಎರಡು ವರ್ಷಗಳಿಂದ ಈ ವಿಭಾಗದಲ್ಲಿ ಕಾರ್ಯನಿರ್ವಹಿಸಲು ಅಧಿಕಾರಿ ಹಾಗೂ ಸಿಬ್ಬಂದಿ ವರ್ಗ ಸಹಕಾರ ನೀಡಿದ್ದು, ಎಲ್ಲರನ್ನೂ ಅಭಿನಂದಿಸುವುದಾಗಿ ತಿಳಿಸಿದರು. ಅಧಿಕಾರ ಸ್ವೀಕರಿಸಿ ಮಾತನಾಡಿದ ಎಇಇ ಜಿ.ಶಿವಪ್ರಸಾದ್, ಚಳ್ಳಕೆರೆ ತಾಲ್ಲೂಕು ನನ್ನ ಕಾರ್ಯಕ್ಷೇತ್ರವಾಗಿದೆ. ಇದೇ ತಾಲ್ಲೂಕಿನಲ್ಲಿ ಹುಟ್ಟಿ, ಬೆಳೆದು ವಿದ್ಯಾಭ್ಯಾಸ ಪಡೆದಿದ್ದೇನೆ. ಈ ಭಾಗದ ಎಲ್ಲಾ ಜನರೊಂದಿಗೆ ಉತ್ತಮ ಒಡನಾಟ ಹೊಂದಿದ್ದೇನೆ. ಇಲ್ಲಿ ಕಾರ್ಯನಿರ್ವಹಿಸುವ ಅಧಿಕಾರಿ ಮತ್ತು ಸಿಬ್ಬಂದಿ ವರ್ಗ ಇಲಾಖೆ ನಿಯಮಗಳನ್ನು ಪಾಲಿಸುವಲ್ಲಿ ಲೋಪವೆಸಗುವುದಿಲ್ಲ. ಸಾರ್ವಜನಿಕರು ಸಹ ಸಹಕರಾತ್ಮಕವಾಗಿ ಸ್ಪಂದಿಸುತ್ತಾರೆ. ಎಲ್ಲರ ಸಹಕಾರದಿಂದ ಬೆಸ್ಕಾಂ ಇಲಾಖೆಯ ಅಭಿವೃದ್ಧಿಗೆ ಶ್ರಮಿಸುವುದಾಗಿ ತಿಳಿಸಿದರು.

ಅಧಿಕಾರಿಗಳಾದ ಸಿ.ನಾಗರಾಜು, ದೇವರಾಜ್, ಅರುಣ್‌ಕುಮಾರ್, ಸತೀಶ್‌ಕುಮಾರ್, ಶಿವರಾಜ್ ಮುಂತಾದವರು ಉಪಸ್ಥಿತರಿದ್ದರು.

# ದೇವರಾಜ ಅರಸು ಜನ್ಮ ದಿನಾಚರಣೆ

ಚಿತ್ರದುರ್ಗ: ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಹಿಂದುಳಿದ ವರ್ಗಗಳ ಕಲ್ಯಾಣ ಇಲಾಖೆ ಇವರ ಸಂಯುಕ್ತಾಶ್ರಯದಲ್ಲಿ ಇದೇ ಆಗಸ್ಟ್ 20ರದು ಬೆಳಿಗ್ಗೆ 11ಕ್ಕೆ ನಗರದ ತರಾಸು ರಂಗಮಂದಿರದಲ್ಲಿ ಪರಿವರ್ತನೆಯ ಹರಿಕಾರ, ಮಾಜಿ ಮುಖ್ಯಮಂತ್ರಿ ಡಿ.ದೇವರಾಜ ಅರಸು ಅವರ 109ನೇ ಜನ್ಮ ದಿನಾಚರಣೆ ಸಮಾರಂಭ ಹಮ್ಮಿಕೊಳ್ಳಲಾಗಿದೆ. ಯೋಜನೆ ಮತ್ತು ಸಾಂಖ್ಯಿಕ ಸಚಿವರು ಹಾಗೂ ಜಿಲ್ಲಾ ಉಸ್ತುವಾರಿ ಸಚಿವ ಡಿ.ಸುಧಾಕರ್ ಉದ್ಘಾಟನೆ ನೆರವೇರಿಸಿದರು.

# ಜಿಲ್ಲಾ ಜೆಡಿಎಸ್ ಕಚೇರಿಯಲ್ಲಿ ಧ್ವಜಾರೋಹಣ

» ಚಿತ್ರದುರ್ಗ

ಭಾರತದ 78 ನೇ ಸ್ವಾತಂತ್ರ್ಯೋತ್ಸವದ ಅಂಗವಾಗಿ ಜೆಡಿಎಸ್. ಕಚೇರಿಯಲ್ಲಿ ಗುರುವಾರ ಧ್ವಜಾರೋಹಣ ನೆರವೇರಿಸಲಾಯಿತು.

ಜೆಡಿಎಸ್.ಜಿಲ್ಲಾಧ್ಯಕ್ಷ ಜಯಣ್ಣ ಧ್ವಜಾರೋಹಣ ನೆರವೇರಿಸಿ ಗಾಂಧಿ ಮತ್ತು ಡಾ.ಬಿ.ಆರ್. ಅಂಬೇಡ್ಕರ್ ಭಾವಚಿತ್ರಕ್ಕೆ ಪುಷ್ಪಾರ್ಚನೆ ಸಲ್ಲಿಸಿ ಮಾತನಾಡುತ್ತ ಬ್ರಿಟೀಷರ ವಿರುದ್ದ ನಮ್ಮ ಹಿರಿಯರು ಹೋರಾಡಿ ಪ್ರಾಣ ತ್ಯಾಗ ಮಾಡಿದ ಫಲವಾಗಿ ದೇಶಕ್ಕೆ ಸ್ವಾತಂತ್ರ್ಯ ಸಿಕ್ಕಿದೆ. ಇಂದಿನ ಪೀಳಿಗೆ ಹಿರಿಯರ ಇತಿಹಾಸಗಳನ್ನು ತಿಳಿದುಕೊಂಡು ದೇಶಭಕ್ತಿ ಮೈಗೂಡಿಸಿಕೊಳ್ಳುವಂತೆ ಹೇಳಿದರು.

ಜೆಡಿಎಸ್. ರಾಜ್ಯ ಪ್ರಧಾನ ಕಾರ್ಯದರ್ಶಿ ಬಿ.ಕಾಂತರಾಜ್ ಮಾತನಾಡಿ ದೇಶಕ್ಕೆ ಸಿಕ್ಕಿರುವ ಸ್ವಾತಂತ್ರ್ಯದ ಹಿಂದೆ ಅನೇಕ ಹಿರಿಯರ ಹೋರಾಟ ತ್ಯಾಗ ಬಲಿದಾನವಿದೆ. ಪ್ರತಿಯೊಬ್ಬರು ದೇಶಭಕ್ತಿ ಮೈಗೂಡಿಸಿಕೊಂಡು ಹಿರಿಯರನ್ನು ಸ್ಮರಿಸಿಕೊಳ್ಳಬೇಕೆಂದು ತಿಳಿಸಿದರು.




ಜೆಡಿಎಸ್.ಜಿಲ್ಲಾ ಮಹಾ ಪ್ರಧಾನ ಕಾರ್ಯದರ್ಶಿ ಡಿ.ಗೋಪಾಲಸ್ವಾಮಿ ನಾಯಕ, ತಾಲ್ಲೂಕು ಅಧ್ಯಕ್ಷ ತಿಮ್ಮಣ್ಣ, ಕಾಟಿಹಳ್ಳಿ ಕರಿಯಪ್ಪ, ನಗರಸಭೆ ಸದಸ್ಯ ನಸ್ರುಲ್ಲಾ, ಮಂಜುನಾಥ ಎಂ.ಎಸ್, ಜೆಡಿಎಸ್. ರಾಜ್ಯ ಯುವ ಘಟಕದ ಪ್ರಧಾನ ಕಾರ್ಯದರ್ಶಿ ಎಸ್.ಡಿ.ಹನುಮಂತರಾಯ, ಮಲ್ಲಿಕಾರ್ಜುನ್ ಜಿ, ತಿಪ್ಪೇಸ್ವಾಮಿ, ರುದ್ರಣ್ಣ, ನಿಜಲಿಂಗಪ್ಪ, ಪಿ.ರವಿಕುಮಾರ್, ಚಿದಾನಂದ್, ಮಠದಟ್ಟಿ ವೀರಣ್ಣ, ಗೀತ ಬಿ, ಶಿವಕುಮಾರ್, ರಾಜೇಂದ್ರಗೌಡ, ಅಬ್ಬು ಭಾಗವಹಿಸಿದ್ದರು.

## ಪ್ರಮುಖ ಸುದ್ದಿ

# ಸರ್ಕಾರಿ ಶಾಲೆ ಮಕ್ಕಳಿಗೆ ಸ್ಕೂಲ್ ಬ್ಯಾಗ್‌ಗಳ ವಿತರಣೆ

» ಚಿತ್ರದುರ್ಗ

ಜಿಲ್ಲಾ ಕ್ವಾರಿ ಅಂಡ್ ಕ್ರಷರ್ ಮಾಲೀಕರ ಅಸೋಸಿಯೇಷನ್ ವತಿಯಿಂದ ತಮಟಕಲ್ಲಿನಲ್ಲಿರುವ ಆಂಜನೇಯಸ್ವಾಮಿ ಗ್ರಾಮಾಂತರ ಪ್ರೌಢಶಾಲೆ ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯಲ್ಲಿ ದೇಶದ 78 ನೇ ಸ್ವಾತಂತ್ರ್ಯ ದಿನಾಚರಣೆ ಪ್ರಯುಕ್ತ ಮಕ್ಕಳಿಗೆ ಬ್ಯಾಗ್‌ಗಳನ್ನು ವಿತರಿಸಲಾಯಿತು.

ಕ್ವಾರಿ ಅಂಡ್ ಕ್ರಷರ್ ಮಾಲೀಕರ ಸಂಘದ ಅಧ್ಯಕ್ಷ ಅಬ್ದುಲ್ ಮಜೀದ್ ಮಕ್ಕಳಿಗೆ ಬ್ಯಾಗ್‌ಗಳನ್ನು ವಿತರಿಸಿ ಮಾತನಾಡುತ್ತ ಸಂವಿಧಾನಶಿಲ್ಪಿ ಡಾ.ಬಿ.ಆರ್. ಅಂಬೇಡ್ಕರ್‌ರವರು ಸಂವಿಧಾನದ ಮೂಲಕ ಎಲ್ಲಾ ಜಾತಿ ಧರ್ಮದವರಿಗೂ ಸಮಾನತೆಯನ್ನು ನೀಡಿದ್ದಾರೆ. ಅದುವೆ ನಿಜವಾದ ಸ್ವಾತಂತ್ರ್ಯೋತ್ಸವ. ವಿದ್ಯಾರ್ಥಿ ಜೀವನದಲ್ಲಿ ಆತ್ಮವಿಶ್ವಾಸ, ಕಠಿಣ ಪರಿಶ್ರಮ, ಪ್ರಾಮಾಣಿಕ ಹೋರಾಟವಿದ್ದಾಗ ಮಾತ್ರ ಗುರಿ ಮುಟ್ಟಲು ಸಾಧ್ಯ ಎಂದು ಹೇಳಿದರು.



ನಮ್ಮ ದೇಶಕ್ಕೆ ವ್ಯಾಪಾರಕ್ಕಾಗಿ ಬಂದ ಬ್ರಿಟೀಷರು ಕೊನೆಗೆ ನಮ್ಮವರನ್ನೇ ದಾಸ್ಯರನ್ನಾಗಿ ಮಾಡಿಕೊಂಡಾಗ ಅನೇಕ ಹಿರಿಯರು ತಮ್ಮ ಪ್ರಾಣದ ಹಂಗು ತೊರೆದು ಹೋರಾಡಿ ದೇಶಕ್ಕೆ ಸ್ವಾತಂತ್ರ್ಯ ತಂದುಕೊಟ್ಟಿದ್ದಾರೆ. ಅಂತಹ ಪುಣ್ಯಪುರುಷರ ವಿಚಾರಗಳನ್ನು ತಿಳಿದುಕೊಂಡು ಜೀವನದಲ್ಲಿ ಪ್ರತಿಯೊಬ್ಬರು ದೇಶಭಕ್ತಿ ಬೆಳೆಸಿಕೊಳ್ಳಬೇಕೆಂದು ಮಕ್ಕಳಿಗೆ ತಿಳಿಸಿದರು.

ಶಾರದ ಶ್ಯಾಮ್ ಸ್ಟೋನ್ ಕ್ರಷರ್ ಮಾಲೀಕ ಸಂದೀಪ್ ಗುಂಡಾರ್ಪಿ ಮಾತನಾಡಿ ನಮ್ಮ ದೇಶದಲ್ಲಿರುವಂತ ಸ್ವಾತಂತ್ರ್ಯ ಜಗತ್ತಿನ ಬೇರೆ ಯಾವ ರಾಷ್ಟ್ರಗಳಲ್ಲೂ ಇಲ್ಲ. ಡಾ.ಬಿ.ಆರ್.ಅಂಬೇಡ್ಕರ್‌ರವರು ನೀಡಿರುವ ಸಂವಿಧಾನವನ್ನು ಎಲ್ಲರೂ ಓದಿ ಅರ್ಥಮಾಡಿಕೊಂಡರೆ ಸಮಾನತೆ, ಹಕ್ಕು ಅಂದರೇನು ಎನ್ನುವುದು ಗೊತ್ತಾಗುತ್ತದೆ ಎಂದು ಹೇಳಿದರು.

ಆಂಜನೇಯಸ್ವಾಮಿ ಗ್ರಾಮಾಂತರ ಪ್ರೌಢಶಾಲೆಯ ಮುಖ್ಯ ಶಿಕ್ಷಕ ಟಿ.ಹೆಚ್. ಗಿರೀಶ್, ಶಿಕ್ಷಕ ಕಲ್ಲೇಶ್‌ಕುಮಾರ್, ಎಸ್.ಡಿ.ಎಂ.ಸಿ.ಅಧ್ಯಕ್ಷರು ಹಾಗೂ ಸರ್ಕಾರಿ ಹಿರಿಯ ಪ್ರಾಥಮಿಕ ಶಾಲೆಯ ಮುಖ್ಯ ಶಿಕ್ಷಕರು, ಎಸ್.ಡಿ.ಎಂ.ಸಿ. ಅಧ್ಯಕ್ಷರು ಮತ್ತು ಶಿಕ್ಷಕರು ಸ್ವಾತಂತ್ರ್ಯ ದಿನಾಚರಣೆಯಲ್ಲಿ ಭಾಗವಹಿಸಿದ್ದರು.

ಮಕ್ಕಳಿಂದ ವಿವಿಧ ಸಾಂಸ್ಕೃತಿಕ ನೃತ್ಯಗಳು ಪ್ರದರ್ಶನಗೊಂಡಿತು.

Printed by: GOVINDAPPA.T Published by: DARSHAN.T Owned by: DARSHAN.T and Printed at: ASHAYA PRINTERS No.94, C.M.C. Colony, Yangammana Katte, Chitradurga-577 501, Chitradurga Dist, Karnataka state. Published at : No. 55 Ingaladal Main Street, Near Canara Banak , Ingaladal Village, Ingaladal Post - 577524, Chitradurga Tq, Chitradurga Dist, Karnataka state. Editor : DARSHAN.T